ಸಂಪುಟ: 11 ಸಂಚಿಕೆ: 216 ಪುಟಗಳು: 4+2 ಬೆಲೆ: ₹ 3.00 ಶುಕ್ರವಾರ, ಅಕ್ಟೋಬರ್ 02, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 216 Pages : 4+2 Rate : 3.00 Friday, October 02, 2026 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2020-22

### ಜನರನ್ನು ದಿಕ್ಕು ತಪ್ಪಿಸುವ ಕೆಲಸ - ಅನಿಲ್ ಮೆಣಸಿನಕಾಯಿ ವಿರುದ್ಧ ಬಿ.ಬಿ. ಅಸೂಟಿ ವಾಗ್ದಾಳಿ

# ನೀರು ಕೊಡಿ ಎಂದವರಿಗೆ 'ರಾಜಕಾರಣ'ದ ತಿರುಗೇಟು

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದ ಕುಡಿಯುವ ನೀರಿನ ಸಮಸ್ಯೆ ಇದೀಗ ರಾಜಕೀಯ ವಾಕ್ಸಮರಕ್ಕೆ ಕಾರಣವಾಗಿದೆ. ನೀರಿನ ಸಮಸ್ಯೆ ಪರಿಹಾರಕ್ಕೆ ₹59.80 ಕೋಟಿ ವೆಚ್ಚದ ಯೋಜನೆಗೆ ಆಡಳಿತಾತ್ಮಕ ಮಂಜೂರಾತಿ ದೊರೆತಿದ್ದು, ಹಲವು ಕಾಮಗಾರಿಗಳು ಪ್ರಗತಿಯಲ್ಲಿವೆ. ಆದರೂ ಬಿಜೆಪಿ ಮುಖಂಡರು ನೀರಿನ ವಿಚಾರದಲ್ಲಿ ರಾಜಕಾರಣ ಮಾಡುತ್ತಿದ್ದಾರೆ ಎಂದು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ ಆರೋಪಿಸಿದರು.

ಗುರುವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಸಕ ಎಚ್.ಕೆ. ಪಾಟೀಲರ ನೇತೃತ್ವದಲ್ಲಿ ಅವಳಿ ನಗರದ ನೀರಿನ ಸಮಸ್ಯೆ ಪರಿಹಾರಕ್ಕೆ ಹಲವು ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಹೇಳಿದರು.

ಅವಳಿ ನಗರದ ಐದು ಕಡೆ ಮೇಲ್ಮಟ್ಟದ ಜಲಸಂಗ್ರಹಾರಗಳ ನಿರ್ಮಾಣ ಸೇರಿದಂತೆ ₹59.80 ಕೋಟಿ ವೆಚ್ಚದ ಕಾಮಗಾರಿಗೆ ಮೇ 6, 2026ರಂದು ಆಡಳಿತಾತ್ಮಕ ಮಂಜೂರಾತಿ ದೊರೆತಿದೆ. ಹಮ್ಮಿಗಿ ಬ್ಯಾರೇಜ್‌ನಿಂದ ಹಮ್ಮಿಗಿ ಪಂಪ್‌ಹೌಸ್, ಡಂಬಳ ಪಂಪ್‌ಹೌಸ್ ಹಾಗೂ ಪಾಪನಾಶಿ ನೀರು ಶುದ್ಧೀಕರಣ ಘಟಕಗಳಲ್ಲಿ ಹೊಸ ಮೋಟಾರ್, ಪಂಪ್, ಪ್ಯಾನಲ್ ಬೋರ್ಡ್ ಮತ್ತು ಟಿಸಿ ಅಳವಡಿಸುವ ಕಾಮಗಾರಿ ನಡೆಯುತ್ತಿದೆ. ಅಪೂರ್ಣಗೊಂಡಿರುವ ಎರಡು ಜಲಸಂಗ್ರಹಾರಗಳನ್ನು ಪೂರ್ಣಗೊಳಿಸಿ ಒಟ್ಟು 18 ಮೇಲ್ಮಟ್ಟದ ಜಲಸಂಗ್ರಹಾರಗಳಿಗೆ ಏಕಕಾಲದಲ್ಲಿ ನೀರು ತುಂಬಿಸುವ ಯೋಜನೆಯ ಟೆಂಡರ್ ಪ್ರಕ್ರಿಯೆ ಆಗಸ್ಟ್‌ನಲ್ಲೇ ಪೂರ್ಣಗೊಂಡಿದೆ ಎಂದು ತಿಳಿಸಿದರು.

ಪಾಪನಾಶಿ ನೀರು ಶುದ್ಧೀಕರಣ ಘಟಕದಿಂದ ಗದಗ ಎ ಪಾಯಿಂಟ್‌ವರೆಗೆ ಹೊಸ ಪೈಪ್‌ಲೈನ್ ಅಳವಡಿಸಲು ₹26.33 ಕೋಟಿ ವೆಚ್ಚದ ಕಾಮಗಾರಿಗೆ ಟೆಂಡರ್ ಕರೆಯಲು ಅಪೆಕ್ಸ್ ಸಮಿತಿ ಸೆ. 28ರಂದು ನಿರ್ಣಯ ಕೈಗೊಂಡಿದೆ. ಪಾಪನಾಶಿ ನೀರು ಶುದ್ಧೀಕರಣ ಘಟಕದ ಬಳಿ ₹20 ಕೋಟಿ ವೆಚ್ಚದಲ್ಲಿ ನೀರು ಸಂಗ್ರಹಣಾ ಕೆರೆ ನಿರ್ಮಿಸುವ ವಿಸ್ತೃತ ಯೋಜನೆಯೂ ಟೆಂಡರ್ ಹಂತದಲ್ಲಿದೆ ಎಂದರು.



ನೀರಿನ ಸಮಸ್ಯೆ ನಿವಾರಣೆಗೆ ಇಷ್ಟೆಲ್ಲ ಕ್ರಮಗಳು ನಡೆಯುತ್ತಿದ್ದರೂ ಅನಿಲ್ ಮೆಣಸಿನಕಾಯಿ ಬೀದಿಗಿಳಿದು ಹೋರಾಟ ನಡೆಸುವ ಮೂಲಕ ಜನರನ್ನು ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಅಸೂಟಿ ಆರೋಪಿಸಿದರು.

ಗದಗ-ಬೆಟಗೇರಿ ಅವಳಿ ನಗರದ ನೀರಿನ ಸಮಸ್ಯೆ ಪರಿಹಾರಕ್ಕೆ ದಿ. ಕೆ.ಎಚ್. ಪಾಟೀಲರು 1972ರಲ್ಲೇ ಬೋರ್‌ವೆಲ್‌ಗಳನ್ನು ಕೊರೆಸುವ ಮೂಲಕ ಕ್ರಮ ಕೈಗೊಂಡಿದ್ದರು. 1992ರ ಮಾರ್ಚ್ 16ರಂದು ತುಂಗಭದ್ರಾ ನದಿಯಿಂದ ನೀರು ತರುವ ಯೋಜನೆ ಜಾರಿಗೆ ಬಂದಿತು. 2013ರಲ್ಲಿ ಎಚ್.ಕೆ. ಪಾಟೀಲರು ಗ್ರಾಮೀಣಾಭಿವೃದ್ಧಿ ಸಚಿವರಾಗಿದ್ದಾಗ ಹಮ್ಮಿಗಿ ಬ್ಯಾರೇಜ್‌ನಿಂದ ಪ್ರತಿದಿನ 40 ಎಂಎಲ್‌ಡಿ ನೀರು ತರುವ ಎರಡನೇ ಹಂತದ ಯೋಜನೆ ಜಾರಿಗೊಳಿಸಿದ್ದರು ಎಂದು ಅಸೂಟಿ ವಿವರಿಸಿದರು.

> ₹59.80 ಕೋಟಿ ಯೋಜನೆ ಸೇರಿದಂತೆ ಹಲವು ಕಾಮಗಾರಿಗಳು ಪ್ರಗತಿಯಲ್ಲಿವೆ. ಆದರೂ ನೀರಿನ ವಿಚಾರದಲ್ಲಿ ಬಿಜೆಪಿ ರಾಜಕಾರಣ ಮಾಡುತ್ತಿದೆ.
>
> – ಬಿ.ಬಿ. ಅಸೂಟಿ

**ಟಿಕೆಟ್ ಭಯದಿಂದ ಹೋರಾಟ ಎಂದ ಅಸೂಟಿ**

ಅನಿಲ್ ಮೆಣಸಿನಕಾಯಿ ಚುನಾವಣೆಯಲ್ಲಿ ಸೋತ ಬಳಿಕ ಕ್ಷೇತ್ರದಿಂದ ದೂರವಾಗಿದ್ದರು. ಮುಂದಿನ ಚುನಾವಣೆಗೆ ಸ್ಪರ್ಧಿಸುವುದಿಲ್ಲ ಎಂದು ಸಾಮಾಜಿಕ ಜಾಲತಾಣದಲ್ಲಿ ಹೇಳಿಕೊಂಡಿದ್ದರು. ಎಚ್.ಕೆ. ಪಾಟೀಲ ಹಾಗೂ ಡಿ.ಆರ್. ಪಾಟೀಲರ ವಿರುದ್ಧ ಮಾತನಾಡಿದ್ದಕ್ಕೆ ಕ್ಷಮೆಯನ್ನೂ ಕೇಳಿದ್ದರು. ಇದೀಗ ಬಿಜೆಪಿ ಟಿಕೆಟ್ ಸಿಗುವುದಿಲ್ಲ ಎಂಬುದು ಖಾತ್ರಿಯಾಗುತ್ತಿದ್ದಂತೆ ಮತ್ತೆ ಗದಗದಲ್ಲಿ ಸಕ್ರಿಯರಾಗಿ ಹೋರಾಟ ಆರಂಭಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಸ್ವಪಕ್ಷದಿಂದಲೂ ನೋಟಿಸ್ ಪಡೆದಿದ್ದಾರೆ ಎಂದು ಅಸೂಟಿ ಆರೋಪಿಸಿದರು. ಟಿಕೆಟ್ ಕೈತಪ್ಪುವ ಭಯದಿಂದ ಈ ರೀತಿಯ ಹೋರಾಟದ ನಾಟಕ ಮಾಡುತ್ತಿ ದ್ದಾರೆ ಎಂದು ಬಿ.ಬಿ. ಅಸೂಟಿ ಟೀಕಿಸಿದರು. ಸುದ್ದಿಗೋಷ್ಠಿಯಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ನಗರಸಭೆ ಸದಸ್ಯರಾದ ಬರಕತ್ ಅಲಿ ಮುಲ್ಲಾ, ಶಕುಂತಲಾ ಅಕ್ಕಿ, ನಮಾಜಿ, ಇಮ್ತಿಯಾಜ್ ಶಿರಹಟ್ಟಿ, ಕೃಷ್ಣ ಪರಾಪೂರ, ಲಕ್ಷ್ಮಿ ಸಿದ್ದಮ್ಮನಹಳ್ಳಿ ಉಪಸ್ಥಿತರಿದ್ದರು.

---

ಗಾಂಧೀಜಿ ಭೇಟಿ ನೀಡಿದ ಐತಿಹಾಸಿಕ ಗ್ರಾಮಕ್ಕೆ ಆದ್ಯತೆ ನೀಡುವಂತೆ ಸ್ಥಳೀಯರ ಆಗ್ರಹ

## ಬಾಪು ಹೆಜ್ಜೆ ಇಟ್ಟ ಜಕ್ಕಲಿಯಲ್ಲೇ ಗಾಂಧಿ ಸ್ತಂಭ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮಹಾತ್ಮ ಗಾಂಧೀಜಿ ಅವರು 1934ರಲ್ಲಿ ಭೇಟಿ ನೀಡಿದ ಐತಿಹಾಸಿಕ ಜಕ್ಕಲಿ ಗ್ರಾಮದಲ್ಲಿಯೇ ಸರ್ಕಾರ ಗಾಂಧಿ ಸ್ತಂಭ ನಿರ್ಮಿಸಬೇಕು ಎಂಬ ಬೇಡಿಕೆ ಸ್ಥಳೀಯರಿಂದ ಕೇಳಿಬಂದಿದೆ.

ಗಾಂಧೀಜಿ ಭೇಟಿ ನೀಡಿದ ಸ್ಥಳಗಳಲ್ಲಿ ಅವರ ಸ್ಮರಣೆಯನ್ನು ಶಾಶ್ವತಗೊಳಿಸುವ ಉದ್ದೇಶದಿಂದ ಸರ್ಕಾರ ಗಾಂಧಿ ಸ್ತಂಭ ನಿರ್ಮಾಣಕ್ಕೆ ಮುಂದಾಗಿರುವುದು ಸ್ವಾಗತಾರ್ಹ. ಆದರೆ, ಬಾಪು ಅವರ ಹೆಜ್ಜೆ ಗುರುತು ಮೂಡಿರುವ ಜಕ್ಕಲಿ ಗ್ರಾಮಕ್ಕೆ ಈ ಯೋಜನೆಯಲ್ಲಿ ಆದ್ಯತೆ ನೀಡಬೇಕು ಎಂಬುದು ಗ್ರಾಮಸ್ಥರ ಆಶಯವಾಗಿದೆ.

1934ರ ಮಾರ್ಚ್ 3ರಂದು ಮಹಾತ್ಮ ಗಾಂಧೀಜಿ ಜಕ್ಕಲಿ ಗ್ರಾಮಕ್ಕೆ ಆಗಮಿಸಿ ಗ್ರಾಮಸ್ಥರನ್ನುದ್ದೇಶಿಸಿ ಮಾತನಾಡಿದ್ದರು. ಸುತ್ತಮುತ್ತಲಿನ ಗ್ರಾಮಗಳಿಂದಲೂ ಅಪಾರ ಸಂಖ್ಯೆಯಲ್ಲಿ ಜನರು ಜಕ್ಕಲಿಗೆ ಆಗಮಿಸಿ ಬಾಪು ಅವರ ದರ್ಶನ ಪಡೆದು, ಅವರ ಸಂದೇಶ ಆಲಿಸಿದ್ದರು ಎಂಬುದು ಸ್ಥಳೀಯ ಇತಿಹಾಸದಲ್ಲಿ ದಾಖಲಾಗಿದೆ. ಹೀಗಾಗಿ, ಸ್ವಾತಂತ್ರ್ಯ ಹೋರಾಟದ ನೆನಪುಗಳನ್ನು ತನ್ನೊಳಗೆ ಹೊತ್ತಿರುವ ಜಕ್ಕಲಿಯಲ್ಲಿ ಸ್ಮಾರಕ ನಿರ್ಮಾಣವಾದರೆ, ಅದು ಮುಂದಿನ ಪೀಳಿಗೆಗೆ ಇತಿಹಾಸದ ಜೀವಂತ ನೆನಪಾಗಿ ಉಳಿಯಲಿದೆ ಎಂದು ಗ್ರಾಮಸ್ಥರು ಹೇಳಿದ್ದಾರೆ.

ಗಾಂಧೀಜಿ ಹೆಜ್ಜೆ ಇಟ್ಟ ಜಕ್ಕಲಿಯಲ್ಲಿಯೇ ಅವರ ಸ್ಮರಣಾರ್ಥ ಗಾಂಧಿ ಸ್ತಂಭ ನಿರ್ಮಾಣವಾಗಬೇಕು. ಇದು ಕೇವಲ ಸ್ಮಾರಕ ನಿರ್ಮಾಣವಲ್ಲ. ಬಾಪು ಅವರೊಂದಿಗೆ ಜಕ್ಕಲಿಗಿರುವ ಐತಿಹಾಸಿಕ ನಂಟನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಕಾರ್ಯ. ಸರ್ಕಾರ ಜಕ್ಕಲಿಯ ಐತಿಹಾಸಿಕ ಮಹತ್ವ ಪರಿಗಣಿಸಿ ಸ್ತಂಭ ನಿರ್ಮಾಣಕ್ಕೆ ಆದ್ಯತೆ ನೀಡಬೇಕು ಎಂದು ನ್ಯಾಯವಾದಿ ರವೀಂದ್ರನಾಥ ದೊಡ್ಡಮೇಟಿ ಆಗ್ರಹಿಸಿದ್ದಾರೆ.

---

### ದೀರ್ಘಾಯುಷ್ಯ, ಆರೋಗ್ಯಕರ ಬದುಕಿಗೆ ಜೀವನಕ್ರಮ ಮರುಚಿಂತನೆ ಅಗತ್ಯ: ಡಿಸಿ ಸಿ.ಎನ್. ಶ್ರೀಧರ್

## ಹಿರಿಯರ ಅನುಭವವೇ ಯುವ ಪೀಳಿಗೆಗೆ ದಾರಿದೀಪ



> ಹಿರಿಯರ ಜೀವನಾನುಭವ ಯುವ ಪೀಳಿಗೆಗೆ ದಾರಿದೀಪ. ಅವರ ಅನುಭವವನ್ನು ಗೌರವಿಸಿ ಜೀವನದಲ್ಲಿ ಅಳವಡಿಸಿಕೊಂಡರೆ ಸಮಾಜದಲ್ಲಿ ತಪ್ಪುಗಳು ಕಡಿಮೆಯಾಗುತ್ತವೆ.
>
> – ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ, ಗದಗ

**ವಿಜಯಸಾಕ್ಷಿ ಸುದ್ದಿ, ಗದಗ**

ದೀರ್ಘಾಯುಷ್ಯ ಹಾಗೂ ಸುದೀರ್ಘ ಜೀವನಕ್ಕಾಗಿ ದಿನನಿತ್ಯದ ಜೀವನಕ್ರಮವನ್ನು ಮರುಚಿಂತನೆ ಮಾಡುವುದು ಅಗತ್ಯ. ಹಿರಿಯರ ಜೀವನಾನುಭವಗಳನ್ನು ಯುವ ಪೀಳಿಗೆ ಅಳವಡಿಸಿಕೊಂಡರೆ ಸಮಾಜದಲ್ಲಿನ ಹಲವು ತಪ್ಪುಗಳನ್ನು ಕಡಿಮೆ ಮಾಡಬಹುದು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯಿತಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಹಾಗೂ ವಿವಿಧ ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಿದ್ದ ವಿಶ್ವ ಹಿರಿಯ ನಾಗರಿಕರ ದಿನಾಚರಣೆ-2026 ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮನುಷ್ಯನಿಗೆ ವಯಸ್ಸಾದಂತೆ ಅನುಭವ ಹೆಚ್ಚುತ್ತದೆ. ಅನುಭವಕ್ಕೆ ಪರ್ಯಾಯವಿಲ್ಲ. ಹಿರಿಯರು ಕಲಿತ ಜೀವನಾನುಭವಗಳನ್ನು ಕಿರಿಯರು ಅಳವಡಿಸಿಕೊಂಡರೆ ಸಮಾಜದಲ್ಲಿ ನಡೆಯುವ ಹಲವು ತಪ್ಪುಗಳನ್ನು ತಡೆಯಬಹುದು.

ಪ್ರಸ್ತುತ ವಿಭಕ್ತ ಕುಟುಂಬಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಹಿರಿಯರನ್ನು ನಿರ್ಲಕ್ಷಿಸುವ ಪ್ರವೃತ್ತಿಯೂ ಹೆಚ್ಚುತ್ತಿದೆ. ಹೀಗಾಗಿ ಹಿರಿಯರೊಂದಿಗೆ ಸಮಯ ಕಳೆಯುವ ಹಾಗೂ ಅವರ ಅನುಭವಕ್ಕೆ ಗೌರವ ನೀಡುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದರು.

ನಿಶ್ಚಿಂತೆ ಹಾಗೂ ಸಕ್ರಿಯ ಜೀವನವೇ ದೀರ್ಘಾಯುಷ್ಯದ ಮೂಲ ರಹಸ್ಯ. ಮನಸ್ಸು ಮತ್ತು ದೇಹ ಸಮನ್ವಯದಿಂದ ಸಾಗಿದಾಗ ವಯಸ್ಸಿನ ಸವಾಲುಗಳನ್ನು ಎದುರಿಸಬಹುದು.

ವಯಸ್ಸು ಕೇವಲ ಒಂದು ಸಂಖ್ಯೆ. ಹಿರಿಯರು ತಮ್ಮ ಅನುಭವದ ಸಾರವನ್ನು ಯುವ ಪೀಳಿಗೆಗೆ ಹಂಚಬೇಕು. ಕಿರಿಯರು ಹಿರಿಯರ ಮಾರ್ಗದರ್ಶನದಲ್ಲಿ ಸಾಗಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಹಿರಿಯ ನಾಗರಿಕರನ್ನು ಸನ್ಮಾನಿಸಲಾಯಿತು. ಸಾಂಸ್ಕೃತಿಕ ಹಾಗೂ ಕ್ರೀಡಾ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

ಶ್ರೀದೇವಿ ಎಸ್.ಎನ್. ಸ್ವಾಗತಿಸಿದರು. ಹೊಳೆಆಲೂರಿನ ಜ್ಞಾನಸಿಂಧು ರೆಸಿಡೆನ್ಶಿಯಲ್ ಅಂಧ ಮಕ್ಕಳ ಶಾಲೆಯ ವಿದ್ಯಾರ್ಥಿಗಳು ರಾಷ್ಟ್ರಗೀತೆ ಹಾಗೂ ನಾಡಗೀತೆ ಪ್ರಸ್ತುತಪಡಿಸಿದರು. ಪ್ರೊ. ಶಕುಂತಲಾ ಸಿಂಧೂರು ನಿರೂಪಿಸಿ ವಂದಿಸಿದರು.

ಜಿಪಂ ಸಿಇಒ ಮುಕುಲ್ ಜೈನ್, ಉಪನಿರ್ದೇಶಕಿ ರಾಧಾ ಮಣ್ಣೂರು, ಬಿ.ಎಂ. ಬಿಳೆಯಲಿ, ಕೆ.ಎಚ್. ಬೇಲೂರು, ಜಿ.ಎಸ್. ಹಿರೇಮಠ, ಎಸ್. ಕೆ. ಖಂಡಪ್ಪಗೌಡ್ರ ಸೇರಿದಂತೆ ಹಿರಿಯ ನಾಗರಿಕರು ಹಾಗೂ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

---

## ಸಭಾಪತಿ ಜಿ.ಎಸ್. ಪಾಟೀಲರಿಗೆ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ಗದಗ**

ವಿಧಾನಸಭೆಯ ನೂತನ ಸಭಾಪತಿ ಹಾಗೂ ಹಿರಿಯ ರಾಜಕಾರಣಿ ಜಿ.ಎಸ್. ಪಾಟೀಲ ಅವರನ್ನು ವಿವಿಧ ಸಂಘಟನೆಗಳ ಮುಖಂಡರು ಸನ್ಮಾನಿಸಿ ಗೌರವಿಸಿದರು.

ಗುರುವಾರ ರೋಣದಲ್ಲಿರುವ ಜಿ. ಎಸ್. ಪಾಟೀಲ ಅವರ ನಿವಾಸಕ್ಕೆ ತೆರಳಿದ ವಿವಿಧ ಸಂಘಟನೆಗಳ ನಿಯೋಗ ಸನ್ಮಾನಿಸಿ, ಗದಗ ಜಿಲ್ಲೆಯ ಹಿರಿಯ ರಾಜಕಾರಣಿಗೆ ವಿಧಾನಸಭೆಯ ಸಭಾಪತಿ ಸ್ಥಾನ ದೊರೆತಿರುವುದು ಜಿಲ್ಲೆಯ ಜನತೆಗೆ ಹೆಮ್ಮೆ ಹಾಗೂ ಅಭಿಮಾನದ ಸಂಗತಿ ಎಂದು ತಿಳಿಸಿದರು.

ನಿಯೋಗದ ನೇತೃತ್ವವನ್ನು ಗದುಗಿನ ಅಂಜುಮನ್ ಇಸ್ಲಾಂ ಪಾಲಿಟೆಕ್ನಿಕ್‌ನ ನಿರ್ದೇಶಕ ಹಾಗೂ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಸದಸ್ಯ ಶಿರಾಜ್‌ಅಹ್ಮದ್ ಖಾಜಿ, ಗದಗ ಎಪಿಎಂಸಿಯ ಮಾಜಿ ಸದಸ್ಯ ಜಿ.ಆರ್. ಕರಡಿ, ನಿವೃತ್ತ ಪ್ರಾಚಾರ್ಯರಾದ ಎ.ಎಂ. ಮುಲ್ಲಾ ಹಾಗೂ ಎಸ್.ಎಸ್. ಇನಾಮದಾರ ವಹಿಸಿದ್ದರು. ಈ ಸಂದರ್ಭದಲ್ಲಿ ಗಣ್ಯರು ಉಪಸ್ಥಿತರಿದ್ದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಸಭಾಪತಿ ಜಿ.ಎಸ್. ಪಾಟೀಲ, ತಮಗೆ ದೊರೆತಿರುವ ರಾಜಕೀಯ ಸ್ಥಾನಮಾನವನ್ನು ಜನಪರ ಕಾರ್ಯಗಳಿಗೆ ಹಾಗೂ ರಾಜ್ಯದ ಹಿತಾಸಕ್ತಿಗೆ ಸದುಪಯೋಗಪಡಿಸಿಕೊಳ್ಳುವುದಾಗಿ ಹೇಳಿದರು.

---

## ವಿದ್ಯುತ್ ಮಗ್ಗ ತರಬೇತಿಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯುತ್ ಮಗ್ಗ ಸೇವಾ ಕೇಂದ್ರ, ನರಸಾಪುರ-ಬೆಟಗೇರಿ ವತಿಯಿಂದ ವಿದ್ಯುತ್ ಮಗ್ಗದಲ್ಲಿ ನೇಯ್ಗೆ ತರಬೇತಿ ಹಾಗೂ ಜಾಬರ ತರಬೇತಿ ಕಾರ್ಯಕ್ರಮ ಆಯೋಜಿಸಲಾಗಿದೆ.
ತರಬೇತಿ ಪಡೆಯಲು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು 18ರಿಂದ 35 ವರ್ಷ ವಯೋಮಿತಿಯೊಳಗಿದ್ದು, ಕನಿಷ್ಠ 5ನೇ ತರಗತಿ ಉತ್ತೀರ್ಣರಾಗಿರಬೇಕು. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ನಿಯಮಾನುಸಾರ ಆದ್ಯತೆ ನೀಡಲಾಗುವುದು.

ಆಸಕ್ತ ಅಭ್ಯರ್ಥಿಗಳು ಅರ್ಜಿಯನ್ನು ಸಹಾಯಕ ನಿರ್ದೇಶಕರು ಹಾಗೂ ಪ್ರಭಾರಾಧಿಕಾರಿಗಳು, ವಿದ್ಯುತ್ ಮಗ್ಗ ಸೇವಾ ಕೇಂದ್ರ, ಶೆಡ್ ಸಂಖ್ಯೆ 54, ಕೆಎಸ್‌ಟಿಐಡಿಸಿ ಪಾವರಲೂಮ್ ಪಾರ್ಕ್, ನರಸಾಪುರ, ಬೆಟಗೇರಿ-ಗದಗ ಕಚೇರಿಯಿಂದ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಅದೇ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ 08372-297322ಕ್ಕೆ ಸಂಪರ್ಕಿಸಬಹುದು ಎಂದು ವಿದ್ಯುತ್ ಮಗ್ಗ ಸೇವಾ ಕೇಂದ್ರದ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

### ಅ.2ರಿಂದ 4ರವರೆಗೆ ರಾಜ್ಯದಲ್ಲೇ ಮೊದಲ ಬಾರಿ ಶವಗಳ ಮೇಲೆ ಯುರಾಲಜಿ ತರಬೇತಿ

## ಇಂದಿನಿಂದ ಯುರಾಲಜಿ ತಜ್ಞರ ಸಮಾಗಮ



**ವಿಜಯಸಾಕ್ಷಿ ಸುದ್ದಿ, ಗದಗ**

ವೈದ್ಯಕೀಯ ಜ್ಞಾನ, ವೃತ್ತಿಪರ ಸಹಕಾರ ಹಾಗೂ ರೋಗಿಗಳ ಉತ್ತಮ ಆರೈಕೆ ಆಶಯದೊಂದಿಗೆ ಕರ್ನಾಟಕ ಯೂರಾಲಜಿ ಅಸೋಸಿಯೇಷನ್ ಹಾಗೂ ಟ್ರಾನ್ಸ್‌ಪ್ಲಾಂಟ್ ಆ್ಯಂಡ್ ಯುರೊಜೆನಿಟಲ್ ಸೊಸೈಟಿ ವತಿಯಿಂದ ಅ.2ರಿಂದ 4ರವರೆಗೆ 'ಕೆಯುಎಸಿಒಎನ್-2026' 31ನೇ ವಾರ್ಷಿಕ ಸಮ್ಮೇಳನ ಗದಗದಲ್ಲಿ ನಡೆಯಲಿದೆ ಎಂದು ಸಂಘಟನಾ ಕಾರ್ಯದರ್ಶಿ ಡಾ. ಅವಿನಾಶ ಓದುಗೌಡರ ತಿಳಿಸಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೂತ್ರಪಿಂಡ, ಮೂತ್ರನಾಳ, ಮೂತ್ರಕೋಶ, ಪ್ರಾಸ್ಟೇಟ್ ಸೇರಿದಂತೆ ಮೂತ್ರ-ಜನನಾಂಗ ವ್ಯವಸ್ಥೆಗೆ ಸಂಬಂಧಿಸಿದ ಕಾಯಿಲೆಗಳ ಆಧುನಿಕ ಚಿಕಿತ್ಸಾ ವಿಧಾನಗಳು ಹಾಗೂ ವೈದ್ಯಕೀಯ ಕ್ಷೇತ್ರದ ಇತ್ತೀಚಿನ ಬೆಳವಣಿಗೆಗಳ ಕುರಿತು ಸಮ್ಮೇಳನದಲ್ಲಿ ಚರ್ಚೆ ನಡೆಯಲಿದೆ ಎಂದರು.

ಅ.2ರಂದು ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಬೆಳಿಗ್ಗೆ 8ರಿಂದ ಮಧ್ಯಾಹ್ನ 2ರವರೆಗೆ ಶಸ್ತ್ರಚಿಕಿತ್ಸಕರಿಗೆ ತರಬೇತಿ ನೀಡಲಾಗುತ್ತದೆ. ಯುರಾಲಜಿಗೆ ಸಂಬಂಧಿಸಿದಂತೆ ಶವಗಳ ಮೇಲೆ ಪ್ರಾಯೋಗಿಕ ತರಬೇತಿ ನಡೆಯುತ್ತಿರುವುದು ರಾಜ್ಯದಲ್ಲೇ ಮೊದಲ ಬಾರಿ ಎಂದು ಡಾ. ಅವಿನಾಶ ಓದುಗೌಡರ ಹೇಳಿದರು.

ಅಂದು 'ಪ್ರೈಡ್ ಆಫ್ ಗದಗ' ಹೆಸರಿನಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದ್ದು, ಗೊಂಬೆಯಾಟ ಹಾಗೂ ಗಂಗಾವತಿ ಪ್ರಾಣೇಶ ಅವರ ಹಾಸ್ಯ ಕಾರ್ಯಕ್ರಮ ಆಯೋಜಿಸಲಾಗಿದೆ.

ಅ.3ರಂದು ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಶಾಸಕ ಎಚ್.ಕೆ. ಪಾಟೀಲ ಸಮ್ಮೇಳನ ಉದ್ಘಾಟಿಸಲಿದ್ದಾರೆ. ರಾಜ್ಯದ ವಿವಿಧೆಡೆಯಿಂದ ವೈದ್ಯರು ಭಾಗವಹಿಸಲಿದ್ದು, 300 ಮಂದಿಗೆ ಅವಕಾಶವಿದ್ದು, ಈಗಾಗಲೇ 250 ಮಂದಿ ನೋಂದಣಿ ಮಾಡಿಕೊಂಡಿದ್ದಾರೆ.

ಅ.4ರಂದು ಬೆಳಿಗ್ಗೆ 9ಕ್ಕೆ ಸಮಾರೋಪ ಸಮಾರಂಭ ನಡೆಯಲಿದ್ದು, ಕೊಪ್ಪಳ ಗವಿಮಠದ ಅಭಿನವ ಗವಿಸಿದ್ದೇಶ್ವರ ಸ್ವಾಮೀಜಿ ಹಾಗೂ ನಿವೃತ್ತ ಡೆಪ್ಯುಟಿ ಆರ್ಮಿ ಚೀಫ್ ರಮೇಶ ಹಲಗಲಿ ಭಾಷಣ ಮಾಡಲಿದ್ದಾರೆ.

ವೈದ್ಯ ಎಸ್.ಆರ್. ನಾಗನೂರ, ಸಂಘಟನಾ ಅಧ್ಯಕ್ಷ ಡಾ. ಶರಣಬಸವೇಶ ಬಿ. ಆಲೂರ, ಖಜಾಂಚಿ ಡಾ. ಪವನಕುಮಾರ ಕೋಳಿವಾಡ, ಸಂಯೋಜಕ ಡಾ. ಪ್ರವೀಣ ಡಂಬಳ ಹಾಗೂ ಸಹ ಅಧ್ಯಕ್ಷ ಡಾ. ನಾಗರಾಜ ಎಚ್. ಉಪಸ್ಥಿತರಿದ್ದರು.

---

## ಕೆಪಿಎಸ್‌ಸಿ ನೇಮಕಾತಿ ಅಕ್ರಮಕ್ಕೆ ಬಿಗ್ ಟ್ವಿಸ್ಟ್: ಎಸ್‌ಐಟಿ ರಚನೆಗೆ ಸುಪ್ರೀಂ ತಡೆ

**ವಿಜಯಸಾಕ್ಷಿ ಸುದ್ದಿ, ನವದೆಹಲಿ**

ರಾಜ್ಯದಲ್ಲಿ ಭಾರಿ ಚರ್ಚೆಗೆ ಕಾರಣವಾಗಿರುವ ಕೆಪಿಎಸ್‌ಸಿ ನೇಮಕಾತಿ ಹಗರಣದ ತನಿಖೆಗೆ ಸಂಬಂಧಿಸಿದಂತೆ ಕರ್ನಾಟಕ ಹೈಕೋರ್ಟ್ ನೀಡಿದ್ದ ಆದೇಶಕ್ಕೆ ಸುಪ್ರೀಂ ಕೋರ್ಟ್ ಮಧ್ಯಂತರ ತಡೆ ನೀಡಿದೆ.

ಎಡಿಜಿಪಿ ಅಲೋಕ್ ಕುಮಾರ್ ನೇತೃತ್ವದಲ್ಲಿ ವಿಶೇಷ ತನಿಖಾ ತಂಡ ರಚಿಸುವಂತೆ ಹೈಕೋರ್ಟ್ ನೀಡಿದ್ದ ಆದೇಶವನ್ನು ಪ್ರಶ್ನಿಸಿ ರಾಜ್ಯ ಸರ್ಕಾರ ಸಲ್ಲಿಸಿದ್ದ ಮೇಲ್ಮನವಿ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಿಚಾರಣೆ ನಡೆಸಿತು.

ರಾಜ್ಯ ಸರ್ಕಾರದ ಪರ ಹಿರಿಯ ವಕೀಲ ಕಪಿಲ್ ಸಿಬಲ್ ವಾದ ಮಂಡಿಸಿ, ಎಫ್‌ಐಆರ್ ದಾಖಲಾದ ದಿನದಿಂದಲೂ ಸಿಐಡಿ ಅಧಿಕಾರಿಗಳು ಪ್ರಕರಣದ ತನಿಖೆ ನಡೆಸುತ್ತಿದ್ದಾರೆ. ಹೀಗಿರುವಾಗ ಹೈಕೋರ್ಟ್ ಎಸ್‌ಐಟಿ ರಚನೆಗೆ ಆದೇಶಿಸಿರುವುದನ್ನು ಪ್ರಶ್ನಿಸಿದರು.

---

## ಇಂದು ಗಾಂಧೀಜಿ, ಶಾಸ್ತ್ರಿಜಿ ಜಯಂತಿ ಆಚರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ 157ನೇ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿಜಿ ಅವರ 122ನೇ ಜಯಂತಿ ಅಂಗವಾಗಿ ಗದಗದಲ್ಲಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ವತಿಯಿಂದ ಅ. 2ರಂದು ಬೆಳಿಗ್ಗೆ 11 ಗಂಟೆಗೆ ನಗರದ ದಿ. ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿರುವ ಜಿಲ್ಲಾ ಕಾಂಗ್ರೆಸ್ ಕಾರ್ಯಾಲಯದಲ್ಲಿ ಜಯಂತಿ ಕಾರ್ಯಕ್ರಮ ನಡೆಯಲಿದೆ. ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ವಾಸಣ್ಣ ಕುರಡಗಿ ನೇತೃತ್ವದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಶಾಸಕ ಎಚ್.ಕೆ. ಪಾಟೀಲ, ಡಿ.ಆರ್. ಪಾಟೀಲ, ಮಾಜಿ ಶಾಸಕರಾದ ಬಿ.ಆರ್. ಯಾವಗಲ್, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ ಸೇರಿದಂತೆ ಪಕ್ಷದ ಮುಖಂಡರು ಹಾಗೂ ವಿವಿಧ ಘಟಕಗಳ ಪದಾಧಿಕಾರಿಗಳು ಭಾಗವಹಿಸಲಿದ್ದಾರೆ ಎಂದು ಪ್ರಚಾರ ಸಮಿತಿಯ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ. ಇದೇ ವೇಳೆ ನಗರದ ಎಪಿಎಂಸಿ ಆವರಣದಲ್ಲಿರುವ ಶ್ರೀರಾಮಕೃಷ್ಣ ವಿವೇಕಾನಂದ ಆಶ್ರಮದ ಗಾಂಧಿ ಸ್ಮಾರಕದಲ್ಲಿ ಅ. 2ರಂದು ಬೆಳಿಗ್ಗೆ 8.30ಕ್ಕೆ ಪ್ರಾರ್ಥನೆ ಹಾಗೂ ಭಜನಾ ಕಾರ್ಯಕ್ರಮ ಆಯೋಜಿಸಲಾಗಿದೆ.

ಸ್ವಾಮಿ ಜಗನ್ನಾಥಾನಂದ ಅವರ ಸಾನ್ನಿಧ್ಯದಲ್ಲಿ ಹೊಸಪೇಟೆಯ ಸುಮೇದಾನಂದರು ಹಾಗೂ ಹುಲಕೋಟಿಯ ಸ್ವಾಮಿ ಶಿವಪ್ರಿಯಾನಂದರು ಕಾರ್ಯಕ್ರಮದ ನೇತೃತ್ವ ವಹಿಸಲಿದ್ದಾರೆ. ಸಕಲ ಸದ್ಭಕ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಶ್ರೀರಾಮಕೃಷ್ಣ ಆಶ್ರಮ ಪ್ರಕಟಣೆಯಲ್ಲಿ ತಿಳಿಸಿದೆ.

---

## ಎಸ್‌ಎಸ್‌ಎಲ್‌ಸಿ, ಪಿಯುಸಿ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಕರುನಾಡು ಘರ್ಜನೆ ಪತ್ರಿಕೆಯ ವತಿಯಿಂದ 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಗದಗ ಜಿಲ್ಲೆಯ ವಿದ್ಯಾರ್ಥಿಗಳಿಗಾಗಿ ಪ್ರತಿಭಾ ಪುರಸ್ಕಾರ ಆಯೋಜಿಸಲಾಗಿದೆ. ಅರ್ಹ ವಿದ್ಯಾರ್ಥಿಗಳಿಂದ ಪುರಸ್ಕಾರಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಪ್ರತಿಭಾ ಪುರಸ್ಕಾರ ಕಾರ್ಯಕ್ರಮದ ದಿನಾಂಕ ಹಾಗೂ ಸ್ಥಳವನ್ನು ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ 9538570216 / 8496098694 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಕರುನಾಡು ಘರ್ಜನೆ ಪತ್ರಿಕೆಯ ಸಂಪಾದಕರಾದ ಎಸ್.ಪಿ.ಎಂ. ಕಾತರಕಿ ಹಾಗೂ ಯಾಸೀನಸಾಬ ಬೋದ್ಲೇಖಾನ ತಿಳಿಸಿದ್ದಾರೆ.

### ಮಹಾತ್ಮ ಗಾಂಧೀಜಿಯವರ 157ನೇ ಜಯಂತಿ ಪ್ರಯುಕ್ತ ವಿಶೇಷ ಲೇಖನ

# ದೇಶದ ಸ್ವಾತಂತ್ರ್ಯ- ಸಮಾನತೆಗೆ ಶ್ರಮಿಸಿದ ಸರಳ ವ್ಯಕ್ತಿತ್ವದ ಮಹಾತ್ಮ ಗಾಂಧೀಜಿ

ವಿದೇಶಿ ಆಡಳಿತವನ್ನು ದೂರ ಮಾಡುವುದು ಸ್ವಾತಂತ್ರ್ಯದ ಒಂದು ಭಾಗ ಮಾತ್ರವಾಗಿದೆ. ದೇಶದ ಆಡಳಿತ ಭಾರತೀಯರ ಕೈಗೆ ಬಂದರೂ ಬಡತನ, ಹಸಿವು, ಅಜ್ಞಾನ, ಅಸಮಾನತೆ, ಅಸ್ಪೃಶ್ಯತೆ, ಶೋಷಣೆ ಮತ್ತು ಭೇದಭಾವಗಳು ಮುಂದುವರೆದರೆ ಅದು ಸಂಪೂರ್ಣ ಸ್ವಾತಂತ್ರ್ಯವಾಗುವುದಿಲ್ಲ ಎನ್ನುವುದು ಮಹಾತ್ಮ ಗಾಂಧೀಜಿಯವರ ಅಭಿಪ್ರಾಯವಾಗಿತ್ತು.

ಅವರ ಕನಸಿನ ಭಾರತದಲ್ಲಿ ಪ್ರತಿಯೊಬ್ಬ ವ್ಯಕ್ತಿಗೂ ಗೌರವದಿಂದ ಬದುಕುವ ಅವಕಾಶ ಇರಬೇಕು. ಬಡವನಿಗೂ ಶ್ರೀಮಂತ ನಿಗೂ ಸಮಾನ ಗೌರವ ದೊರೆಯಬೇಕು. ರೈತ, ಕಾರ್ಮಿಕ, ಮಹಿಳೆ, ದುರ್ಬಲರು ಮತ್ತು ಹಿಂದುಳಿದವರು ಸಮಾಜದ ಮುಖ್ಯ ವಾಹಿನಿಯಲ್ಲಿ ಗೌರವದಿಂದ ಬದುಕಬೇಕು ಎಂಬುದು ಗಾಂಧೀಜಿಯವರ ಕನಸಿನ ಭಾರತದ ಉದ್ದೇಶವಾಗಿತ್ತು.

ಇಂದು ನಾವು ಸ್ವತಂತ್ರ ಭಾರತದಲ್ಲಿ ಬದುಕುತ್ತಿದ್ದೇವೆ. ಆದರೆ ಗಾಂಧೀಜಿಯವರು ಕನಸು ಕಂಡ ಸಂಪೂರ್ಣ ಸ್ವಾತಂತ್ರ್ಯವನ್ನೂ ಸಾಧಿಸಲು ಇನ್ನೂ ಅನೇಕ ಕ್ಷೇತ್ರಗಳಲ್ಲಿ ಕೆಲಸ ನಿರ್ವಹಿಸಬೇಕಾಗಿದೆ. ಬಡತನ, ನಿರುದ್ಯೋಗ, ಭ್ರಷ್ಟಾಚಾರ, ಅಸಮಾನತೆ, ಸಾಮಾಜಿಕ ಭೇದಭಾವ ಮತ್ತು ಪರಿಸರ ಹಾನಿಯಂತಹ ಸಮಸ್ಯೆಗಳನ್ನು ಎದುರಿಸಬೇಕಾಗಿದೆ.

ಯುವಜನತೆ ಶಿಕ್ಷಣದ ಜೊತೆಗೆ ಸತ್ಯ, ಶಿಸ್ತು, ಸೇವೆ, ಸ್ವಾವಲಂಬನೆ ಮತ್ತು ಜವಾಬ್ದಾರಿಯ ಗುಣಗಳನ್ನು ಬೆಳೆಸಿಕೊಳ್ಳಬೇಕು. ತಂತ್ರಜ್ಞಾನವನ್ನು ಸದುಪಯೋಗಪಡಿಸಿಕೊಂಡು ದೇಶದ ಅಭಿವೃದ್ಧಿಗೆ ಕೊಡುಗೆ ನೀಡಬೇಕು. ದೇಶ ಬದಲಾಗಬೇಕೆಂದು ಕಾಯುವುದಕ್ಕಿಂತ ನಮ್ಮಿಂದಲೇ ಬದಲಾವಣೆಯನ್ನು ಆರಂಭಿಸುವುದು ಗಾಂಧೀಜಿಯವರ ಚಿಂತನೆಗೆ ನಿಜವಾದ ಗೌರವ ಕೊಟ್ಟಂತಾಗುತ್ತದೆ.

ದೇಶದ ಇತಿಹಾಸದಲ್ಲಿ ಅನೇಕ ಮಹಾನ್ ನಾಯಕರು ಸ್ವಾತಂತ್ರ್ಯಕ್ಕಾಗಿ ಹೋರಾಡಿದ್ದನ್ನು ಕಾಣಬಹುದಾಗಿದೆ. ಭಾರತದ ಸ್ವಾತಂತ್ರ್ಯ ಹೋರಾಟಕ್ಕೆ ನಾಯಕತ್ವ ನೀಡಿದ್ದಲ್ಲದೇ, ಮನುಷ್ಯನು ಹೇಗೆ ಬದುಕಬೇಕೆಂಬುದನ್ನು ತಿಳಿಸಿಕೊಟ್ಟವರು ಗಾಂಧೀಜಿಯವರು. ಸತ್ಯ, ಅಹಿಂಸೆ, ಪ್ರೀತಿ, ತ್ಯಾಗ, ಸ್ವಾವಲಂಬನೆ, ಶಿಸ್ತು ಮತ್ತು ಸರಳತೆ ಅವರ ಜೀವನದ ಮೌಲ್ಯಗಳಾಗಿದ್ದವು.

ಗಾಂಧೀಜಿಯವರ ಜೀವನ ಸರಳವಾಗಿತ್ತು. ಆದರೆ ಚಿಂತನೆಗಳು ಆಳವಾಗಿದ್ದವು. ನಡೆ-ನುಡಿ ಸರಳವಾಗಿತ್ತು. ಆದರೆ ಗುರಿ ದೊಡ್ಡದಾಗಿತ್ತು. ಗಾಂಧೀಜಿಯವರ ಸರಳ ಜೀವನವು ಕೇವಲ ಒಂದು ಜೀವನಶೈಲಿಯಲ್ಲ. ಅದು ಒಂದು ಚಿಂತನೆ, ನೈತಿಕ ತತ್ವ, ಸಾಮಾಜಿಕ ಸಂದೇಶ ಎಂದು ಹೇಳಬಹುದಾಗಿದೆ.

ಗಾಂಧೀಜಿಯವರ ದೃಷ್ಟಿಯಲ್ಲಿ ಸರಳ ಜೀವನವೆಂದರೆ ಅಗತ್ಯವಿರುವಷ್ಟು ಮಾತ್ರ ಹೊಂದುವುದು, ಅನಗತ್ಯ ಆಸೆಗಳನ್ನು ನಿಯಂತ್ರಿಸುವುದು, ಶ್ರಮವನ್ನು ಗೌರವಿಸುವುದು, ಸತ್ಯವನ್ನು ಪಾಲಿಸುವುದು, ಇತರರ ನೋವನ್ನು ಅರ್ಥಮಾಡಿಕೊಳ್ಳುವುದು, ಸ್ವಾವಲಂಬಿಯಾಗುವುದು, ಪ್ರಕೃತಿಯ ಸಂಪನ್ಮೂಲಗಳನ್ನು ಗೌರವಿಸುವುದು, ಸಮಾಜದ ಒಳಿತಿಗಾಗಿ ಬದುಕುವುದಾಗಿದೆ.

ಗಾಂಧೀಜಿಯವರ ಸರಳತೆ ನನ್ನ ಬಳಿ ಎಷ್ಟು ಇದೆ ಎಂಬ ಪ್ರಶ್ನೆಗಿಂತ ನನ್ನ ಜೀವನದಿಂದ ಇತರರಿಗೆ ಏನು ಪ್ರಯೋಜನ ಎಂಬ ಪ್ರಶ್ನೆಗೆ



ಹೆಚ್ಚಿನ ಮಹತ್ವ ನೀಡುತ್ತದೆ.

ಜೀವನದ ಗುಣಮಟ್ಟ ನಮ್ಮ ಬಳಿ ಇರುವ ವಸ್ತುಗಳ ಸಂಖ್ಯೆಯಿಂದ ಅಲ್ಲ, ನಮ್ಮ ಚಿಂತನೆಯ ಗುಣಮಟ್ಟ ಮತ್ತು ಸಮಾಜಕ್ಕೆ ನೀಡುವ ಕೊಡುಗೆಯಿಂದ ನಿರ್ಧರಿಸುತ್ತದೆ.

ಗಾಂಧೀಜಿಯವರು ಗ್ರಾಮ ಸ್ವರಾಜ್ಯಕ್ಕೆ ಬಹಳ ಪ್ರಾಮುಖ್ಯತೆ ನೀಡಿದ್ದರು. ಭಾರತದ ಶಕ್ತಿ ಗ್ರಾಮಗಳಲ್ಲಿದೆ ಎಂದು ಅವರು ದೃಢವಾಗಿ ನಂಬಿದ್ದರು. ಭಾರತದ ಪ್ರಜೆಗಳು ಕೇವಲ ಮತದಾನ ಮಾಡಿ ಸುಮ್ಮನೆ ಮನೆಯಲ್ಲಿ ಕುಳಿತುಕೊಳ್ಳಬಾರದು. ಆಡಳಿತದಲ್ಲಿ ನಿರಂತರವಾಗಿ ಭಾಗವಹಿಸಬೇಕು.

ರಾಜಕೀಯ ನಾಯಕರಿಗೆ ಮಾರ್ಗದರ್ಶನ ನೀಡಬೇಕು. ರಾಜಕಾರಣಿಗಳು ತಮ್ಮ ಕಾರ್ಯಗಳನ್ನು ಸರಿಯಾಗಿ ಮಾಡುತ್ತಿದ್ದಾರೆ ಅಥವಾ ಇಲ್ಲವೇ ಎಂಬುದರ ಕುರಿತು ಜಾಗೃತಿ ವಹಿಸಬೇಕು.

ಪ್ರಗತಿಪರ ಕಾರ್ಯಗಳ ಬಗ್ಗೆ ರಾಜಕೀಯ ನಾಯಕರಿಗೆ ತಿಳಿಸಬೇಕು. ಒಂದು ಉತ್ತಮವಾದ ರಾಷ್ಟ್ರ ನಿರ್ಮಾಣ ಮಾಡುವುದು ಸರ್ಕಾರದಷ್ಟೇ ಅಲ್ಲ, ಅದು ಭಾರತದ ಪ್ರತಿಯೊಬ್ಬ ಪ್ರಜೆಯದ್ದೂ ಆಗಿದೆ.

ಭಾರತವು ವೈವಿಧ್ಯತೆಯಲ್ಲಿ ಏಕತೆಯ ದೇಶವಾಗಿದೆ. ಇಲ್ಲಿ ವಿವಿಧ ಭಾಷೆ, ಧರ್ಮ, ಸಂಸ್ಕೃತಿ ಮತ್ತು ಸಂಪ್ರದಾಯಗಳ ಜನರು ಒಟ್ಟಾಗಿ ಬದುಕುತ್ತಿದ್ದಾರೆ. ಇಂತಹ ದೇಶದಲ್ಲಿ ಪ್ರತಿಯೊಬ್ಬ ವ್ಯಕ್ತಿಗೂ ಸಮಾನ ಗೌರವ, ಸಮಾನ ಅವಕಾಶ ಮತ್ತು ನ್ಯಾಯ ದೊರೆಯುವುದು ಅತ್ಯಂತ ಅಗತ್ಯವಾಗಿದೆ. ಆದ್ದರಿಂದ ಅಸಮಾನತೆಯ ನಿರ್ಮೂಲನೆ ಕೇವಲ ಸರ್ಕಾರದ ಜವಾಬ್ದಾರಿಯಲ್ಲ, ಅದು ಪ್ರತಿಯೊಬ್ಬ ನಾಗರಿಕನ ನೈತಿಕ ಕರ್ತವ್ಯವೂ ಆಗಿದೆ.

ಅಸಮಾನತೆಯ ವಿರುದ್ಧ ಹೋರಾಡಿದ ಮಹಾನ್ ನಾಯಕರಲ್ಲಿ ಮಹಾತ್ಮ ಗಾಂಧೀಜಿಯವರ ಸ್ಥಾನ ವಿಶಿಷ್ಟವಾಗಿತ್ತು. ಅವರ ದೃಷ್ಟಿಯಲ್ಲಿ ಸ್ವರಾಜ್ಯವೆಂದರೆ ಕೇವಲ ಬ್ರಿಟಿಷರ ಆಳ್ವಿಕೆಯಿಂದ ಮುಕ್ತಿ ಪಡೆಯುವುದಲ್ಲ. ಸಮಾಜದ ಕಟ್ಟಕಡೆಯ ವ್ಯಕ್ತಿಯೂ ಗೌರವದಿಂದ ಬದುಕುವಂತಹ ಭಾರತ ನಿರ್ಮಾಣವಾಗಬೇಕು ಎಂಬುದು ಅವರ ಕನಸಾಗಿತ್ತು. ಗಾಂಧೀಜಿಯವರ ಸರ್ವೋದಯದ ಪರಿಕಲ್ಪನೆಯ ಅರ್ಥವೇ ಎಲ್ಲರ ಉದಯ, ಎಲ್ಲರ ಕಲ್ಯಾಣ. ಅವರ ಸಾಮಾಜಿಕ ಚಿಂತನೆಯ ಪ್ರಮುಖ ಅಂಶಗಳಲ್ಲಿ ಅಸ್ಪೃಶ್ಯತೆಯ ನಿರ್ಮೂಲನೆ, ಮಹಿಳೆಯರ ಉನ್ನತಿ, ಶಿಕ್ಷಣ ಮತ್ತು ಆರ್ಥಿಕ ಸಮಾನತೆ ಸೇರಿದ್ದವು. ಅವರ ನಿರ್ಮಾಣಾತ್ಮಕ ಕಾರ್ಯಕ್ರಮದಲ್ಲಿಯೂ ಅಸ್ಪೃಶ್ಯತೆಯ ನಿರ್ಮೂಲನೆ ಮತ್ತು ಆರ್ಥಿಕ ಸಮಾನತೆಗೆ ಪ್ರಮುಖ ಸ್ಥಾನವಿತ್ತು.

ಗಾಂಧೀಜಿಯವರ ಜೀವನದಲ್ಲಿ ಸತ್ಯಕ್ಕೆ ಅತ್ಯಂತ ಮಹತ್ವವಿತ್ತು. ಅವರು ತಮ್ಮ ಜೀವನವನ್ನೇ ಸತ್ಯದ ಪ್ರಯೋಗಗಳು ಎಂದು ಕಂಡರು.

ತಮ್ಮ ತಪ್ಪುಗಳನ್ನು ಒಪ್ಪಿಕೊಳ್ಳುವುದಕ್ಕೆ ಅವರು ಹಿಂದೆ ಸರಿಯಲಿಲ್ಲ. ಇದರಿಂದ ನಮಗೆ ಒಂದು ಮಹತ್ವದ ಪಾಠ ಸಿಗುತ್ತದೆ. ತಪ್ಪು ಮಾಡುವುದು ಮಾನವ ಸಹಜ ಗುಣ. ಆದರೆ ತಪ್ಪನ್ನು ಮರೆಮಾಚುವುದು ವ್ಯಕ್ತಿತ್ವದ ದೌರ್ಬಲ್ಯ. ತಪ್ಪನ್ನು ತಿದ್ದಿ ನಡೆಯುವುದೇ ನಿಜವಾದ ಮನುಷ್ಯನ ಲಕ್ಷಣವಾಗಿದೆ.

ಮನುಷ್ಯನ ಜೀವನಕ್ಕೆ ದಾರಿ ತೋರಿಸುವ ಅನೇಕ ಮೌಲ್ಯಗಳಿವೆ. ಆದರೆ ಅವುಗಳಲ್ಲಿ ಸತ್ಯ ಮತ್ತು ಅಹಿಂಸೆ ಅತ್ಯಂತ ಶ್ರೇಷ್ಠವಾದವುಗಳು. ಸತ್ಯವು ನಮ್ಮ ಮಾತು ಮತ್ತು ನಡೆಗೆ ಪ್ರಾಮಾಣಿಕತೆಯನ್ನು ನೀಡಿದರೆ, ಅಹಿಂಸೆಯು ನಮ್ಮ ಮನಸ್ಸಿಗೆ ಮಾನವೀಯತೆಯನ್ನು ನೀಡುತ್ತದೆ. ಮಹಾತ್ಮ ಗಾಂಧೀಜಿಯವರು ಈ ಎರಡು ಮೌಲ್ಯಗಳನ್ನು ಕೇವಲ ಉಪದೇಶಿಸಲಿಲ್ಲ. ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಜಗತ್ತಿಗೆ ತೋರಿಸಿದರು. ಮಾತಿಗೆ ತಕ್ಕಂತೆ ಕೃತಿಯಲ್ಲಿಯೂ ಸತ್ಯನಿಷ್ಠೆ ತೋರಿಸಿದರು.

ಗಾಂಧೀಜಿಯವರಿಗೆ ಅಹಿಂಸೆ ಮತ್ತು ಸತ್ಯ ಕೇವಲ ಆದರ್ಶಗಳಾಗಿರಲಿಲ್ಲ. ಅವು ಅವರ ಬದುಕಿನ ಉಸಿರಾಗಿದ್ದವು. ಅಹಿಂಸೆ ಎಂದರೆ ಕೋಪದ ಮೇಲೆ ಜಯ.

ನನ್ನ ಜೀವನದಲ್ಲಿ ಅಹಿಂಸೆಯನ್ನು ಅನುಸರಿಸುವ ಮೊದಲ ಹೆಜ್ಜೆ ನನ್ನ ಕೋಪವನ್ನು ನಿಯಂತ್ರಿಸುವುದು. ನನಗೆ ಯಾರಾದರೂ ನೋವುಂಟು ಮಾಡಿದಾಗ ತಕ್ಷಣ ಕಠಿಣವಾಗಿ ಪ್ರತಿಕ್ರಿಯಿಸುವುದು ಸುಲಭ.

ಆದರೆ ಒಂದು ಕ್ಷಣ ನಿಂತು ಯೋಚಿಸಿ ಶಾಂತವಾಗಿ ಉತ್ತರಿಸುವುದು ನಿಜವಾದ ಶಕ್ತಿಯಾಗಿದೆ. ಇತರರನ್ನು ಸೋಲಿಸುವುದಕ್ಕಿಂತ ಸ್ವಂತ ಕೋಪವನ್ನು ಗೆಲ್ಲುವುದು ದೊಡ್ಡ ಜಯ. ಕೆಟ್ಟ ಪದಗಳಿಂದ ನಿಂದಿಸುವ ಬದಲು ಶಾಂತ ವಾಗಿ ಮಾತನಾಡುವುದು ಅಹಿಂಸೆಯಾಗಿದೆ.

ಮಹಾತ್ಮ ಗಾಂಧೀಜಿಯವರ ಕನಸಿನ ಸಮಾಜದಲ್ಲಿ ಯಾರೂ ಮೇಲು-ಕೀಳು ಎಂಬ ಭೇದವಿಲ್ಲದೇ ಎಲ್ಲರೂ ಸಮಾನವಾಗಿ ಬದುಕಬೇಕೆಂಬುದಾಗಿತ್ತು.

ಗಾಂಧೀಜಿಯವರ ಆದರ್ಶಗಳು ಇಂದಿಗೂ ಪ್ರತಿಯೊಬ್ಬರಿಗೂ ಮಾರ್ಗದರ್ಶನ ನೀಡುತ್ತಿವೆ. ಗಾಂಧೀಜಿಯವರ ವಿಚಾರಧಾರೆಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಶಾಂತಿಯುತ ಸಮಾಜ ನಿರ್ಮಾಣಕ್ಕೆ ಶ್ರಮಿಸಬೇಕಿದೆ.

**-ವಸಂತ ಮಡ್ಲೂರ,**
**ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾ.ಸಂ. ಇಲಾಖೆ, ಗದಗ**

---

### ಸಮತೋಲನ ಆಹಾರ ಹಾಗೂ ಆರೋಗ್ಯಕರ ಜೀವನಶೈಲಿಗೆ ಒತ್ತು

# ಮಹಿಳೆಯರಿಗೆ ಪೌಷ್ಟಿಕ ಆಹಾರದ ಮಹತ್ವ



> ಮಧ್ಯ ವಯಸ್ಸಿನಲ್ಲಿ ಮಹಿಳೆಯರ ದೇಹದಲ್ಲಿ ಹಲವು ಬದಲಾವಣೆಗಳು ಉಂಟಾಗುವುದರಿಂದ, ಪೌಷ್ಟಿಕಾಂಶಯುಕ್ತ ಸಮತೋಲನ ಆಹಾರ ಸೇವನೆಗೆ ಹೆಚ್ಚಿನ ಆದ್ಯತೆ ನೀಡಬೇಕು. ನಿಯಮಿತ ದೈಹಿಕ ಚಟುವಟಿಕೆ ಹಾಗೂ ಆರೋಗ್ಯಕರ ಜೀವನಶೈಲಿಯ ಮೂಲಕ ಹಲವು ಆರೋಗ್ಯ ಸಮಸ್ಯೆಗಳನ್ನು ದೂರವಿಡಬಹುದು.
>
> **- ವೀಣಾ ತಿರ್ಲಾಪುರ, ಗೃಹವಿಜ್ಞಾನ ವಿಭಾಗದ ಮುಖ್ಯಸ್ಥೆ**

**ವಿಜಯಸಾಕ್ಷಿ ಸುದ್ದಿ, ಗದಗ**

ಅಖಿಲ ಕರ್ನಾಟಕ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಮಹಿಳಾ ವಿವಿಧೋದ್ದೇಶಗಳ ಸಂಘ ಹಾಗೂ ಕೆಎಲ್ಇ ಸಂಸ್ಥೆಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಗೃಹವಿಜ್ಞಾನ ವಿಭಾಗದ ಸಹಯೋಗದಲ್ಲಿ 'ಮಧ್ಯ ವಯಸ್ಕ ಮಹಿಳೆಯರಿಗೆ ಪೌಷ್ಟಿಕ ಆಹಾರದ ಮಹತ್ವ' ಕುರಿತು ಜಾಗೃತಿ ಕಾರ್ಯಕ್ರಮ ನಡೆಯಿತು.

ಸಂಘದ ಅಧ್ಯಕ್ಷೆ ಪ್ರೇಮಾ ಮೇಟಿ ಪ್ರಾಸ್ತಾವಿಕವಾಗಿ ಮಾತನಾಡಿ, ಮಧ್ಯ ವಯಸ್ಸಿನಲ್ಲಿ ಮಹಿಳೆಯರು ಆರೋಗ್ಯಕರ ಜೀವನಶೈಲಿ ಹಾಗೂ ಸಮತೋಲನ ಆಹಾರಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಹೇಳಿದರು.

ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಯಾಗಿದ್ದ ಗೃಹವಿಜ್ಞಾನ ವಿಭಾಗದ ಮುಖ್ಯಸ್ಥೆ ವೀಣಾ ತಿರ್ಲಾಪುರ ಅವರು ಮಧ್ಯ ವಯಸ್ಸಿನ ಮಹಿಳೆಯರಿಗೆ ಅಗತ್ಯವಿರುವ ಪೌಷ್ಟಿಕಾಂಶಗಳ ಕುರಿತು ಮಾಹಿತಿ ನೀಡಿದರು. ಈ ಹಂತದಲ್ಲಿ ದೇಹದಲ್ಲಿ ಉಂಟಾಗುವ ದೈಹಿಕ ಹಾಗೂ ಹಾರ್ಮೋನುಗಳ ಬದಲಾವಣೆಗಳಿಗೆ ಅನುಗುಣವಾಗಿ ಆಹಾರ ಪದ್ಧತಿಯಲ್ಲೂ ಸೂಕ್ತ ಬದಲಾವಣೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಕ್ಯಾಲ್ಸಿಯಂ, ಕಬ್ಬಿಣ, ಪ್ರೋಟೀನ್, ನಾರಿನಾಂಶ, ವಿಟಮಿನ್‌ಗಳು ಹಾಗೂ ವಿವಿಧ ಖನಿಜಾಂಶಗಳ ಅಗತ್ಯತೆ ಕುರಿತು ವಿವರಿಸಿದ ಅವರು, ಹಸಿರು ಸೊಪ್ಪು, ತರಕಾರಿ, ಹಣ್ಣು, ಬೇಳೆ-ಕಾಳು, ಹಾಲು ಮತ್ತು ಹಾಲಿನ ಉತ್ಪನ್ನಗಳು ಹಾಗೂ ಸಿರಿಧಾನ್ಯಗಳನ್ನು ಆಹಾರದಲ್ಲಿ ನಿಯಮಿತವಾಗಿ ಬಳಸುವಂತೆ ಸಲಹೆ ನೀಡಿದರು. ಅತಿಯಾದ ಸಕ್ಕರೆ, ಉಪ್ಪು, ಎಣ್ಣೆ ಹಾಗೂ ಸಂಸ್ಕರಿತ ಆಹಾರಗಳ ಸೇವನೆಯನ್ನು ಕಡಿಮೆ ಮಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ಮಹಿಳೆಯರು ಪೌಷ್ಟಿಕ ಆಹಾರ, ದೈನಂದಿನ ಆಹಾರ ಪದ್ಧತಿ ಹಾಗೂ ಆರೋಗ್ಯಕರ ಜೀವನಶೈಲಿಗೆ ಸಂಬಂಧಿಸಿದಂತೆ ವಿವಿಧ ಪ್ರಶ್ನೆಗಳನ್ನು ಕೇಳಿದರು. ವೀಣಾ ತಿರ್ಲಾಪುರ ಅವರು ಪ್ರಶ್ನೆಗಳಿಗೆ ವೈಜ್ಞಾನಿಕವಾಗಿ ಉತ್ತರಿಸಿ, ಉಪಯುಕ್ತ ಸಲಹೆಗಳನ್ನು ನೀಡಿದರು.

ಈ ಸಂದರ್ಭದಲ್ಲಿ ಕಸ್ತೂರಿ ಹಿರೇಗೌಡರ ಅವರು ಮಧ್ಯ ವಯಸ್ಕ ಮಹಿಳೆಯರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ತಿಳಿಸಿದರು.

ಗೃಹವಿಜ್ಞಾನ ವಿಭಾಗದ ವಿದ್ಯಾರ್ಥಿನಿಯರು ಪೌಷ್ಟಿಕ ಆಹಾರ, ಅಗತ್ಯ ಪೌಷ್ಟಿಕಾಂಶಗಳು ಹಾಗೂ ಆರೋಗ್ಯಕರ ಆಹಾರ ಪದ್ಧತಿ ಕುರಿತು ಸಿದ್ಧಪಡಿಸಿದ್ದ ಕರಪತ್ರಗಳನ್ನು ಮಹಿಳೆಯರಿಗೆ ವಿತರಿಸಿದರು.

ಸಂಘದ ಖಜಾಂಚಿ ಸರೋಜಾ ಪೈಲ್ ವಂದನಾರ್ಪಣೆ ಸಲ್ಲಿಸಿದರು. ಸಂಘದ ಮಹಿಳಾ ಸದಸ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

---

### ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಿಂದ ಸಭಾಪತಿ ಜಿ.ಎಸ್. ಪಾಟೀಲರಿಗೆ ಸನ್ಮಾನ

# ಯುವಕರಿಗೆ ತಂತ್ರಜ್ಞಾನ ತರಬೇತಿ ಅನಿವಾರ್ಯ



> ತೀವ್ರ ಸ್ಪರ್ಧೆಯ ಇಂದಿನ ಯುಗದಲ್ಲಿ ಉದ್ಯಮ ನಡೆಸುವುದು ಸವಾಲಿನ ಕೆಲಸವಾಗಿದೆ. ಯುವಕರಿಗೆ ಉದ್ಯಮದ ಬಗ್ಗೆ ತಿಳುವಳಿಕೆ ನೀಡುವುದರ ಜತೆಗೆ ಬದಲಾಗುತ್ತಿರುವ ತಂತ್ರಜ್ಞಾನಕ್ಕೆ ತಕ್ಕಂತೆ ತರಬೇತಿ ನೀಡುವ ಕೆಲಸವನ್ನು ವಾಣಿಜ್ಯೋದ್ಯಮ ಸಂಸ್ಥೆ ಕೈಗೊಳ್ಳಬೇಕು.
>
> **- ಜಿ.ಎಸ್. ಪಾಟೀಲ, ವಿಧಾನಸಭೆ ಸಭಾಪತಿ**

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಿಂದ ವಿಧಾನಸಭೆಯ ನೂತನ ಸಭಾಪತಿ ಜಿ.ಎಸ್. ಪಾಟೀಲ ಅವರನ್ನು ಮಂಗಳವಾರ ಆತ್ಮೀಯವಾಗಿ ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಜಿ.ಎಸ್. ಪಾಟೀಲ, ಗದಗದಲ್ಲಿ ಹಿಂದೆ 'ಆಯಿಲ್ ಕಿಂಗ್', 'ಕಾಟನ್ ಕಿಂಗ್' ಎಂಬ ಹೆಗ್ಗಳಿಕೆ ಹೊಂದಿದ ಉದ್ಯಮಿಗಳಿದ್ದರು. ಕಾಲ ಬದಲಾದಂತೆ ಉದ್ಯಮ ಕ್ಷೇತ್ರದಲ್ಲೂ ಸಾಕಷ್ಟು ಬದಲಾವಣೆಗಳಾಗಿವೆ. ತಂತ್ರಜ್ಞಾನ ಪ್ರತಿವರ್ಷ ಹೊಸ ರೂಪ ಪಡೆಯುತ್ತಿದ್ದು, ತೀವ್ರ ಸ್ಪರ್ಧೆಯ ಇಂದಿನ ಸಂದರ್ಭದಲ್ಲಿ ಉದ್ಯಮ ನಡೆಸುವುದು ಸುಲಭವಲ್ಲ ಎಂದರು.

ಯುವಕರಿಗೆ ಉದ್ಯಮ ಕ್ಷೇತ್ರದ ಬಗ್ಗೆ ತಿಳುವಳಿಕೆ ನೀಡುವುದರ ಜತೆಗೆ ಆಧುನಿಕ ತಂತ್ರಜ್ಞಾನ ಕುರಿತು ತರಬೇತಿ ನೀಡುವ ಕಾರ್ಯವನ್ನು ವಾಣಿಜ್ಯೋದ್ಯಮ ಸಂಸ್ಥೆ ಕೈಗೊಳ್ಳಬೇಕು ಎಂದು ಸಲಹೆ ನೀಡಿದರು. ಸಂಸ್ಥೆ 50 ವರ್ಷಗಳನ್ನು ಪೂರ್ಣಗೊಳಿಸಿ 51ನೇ ವರ್ಷಕ್ಕೆ ಕಾಲಿಟ್ಟಿರುವುದು ಹೆಮ್ಮೆಯ ಸಂಗತಿ. ಪ್ರತಿವರ್ಷ ಹೊಸ ಅಧ್ಯಕ್ಷರು ಹಾಗೂ ಹೊಸ ತಂಡ ಒಂದು ವರ್ಷದ ಅವಧಿಯಲ್ಲಿ ಸಾಧನೆ ತೋರಿಸಬೇಕಾದ ವ್ಯವಸ್ಥೆಯಲ್ಲೂ ಸಂಸ್ಥೆ ದೊಡ್ಡ ಮಟ್ಟದಲ್ಲಿ ಬೆಳೆದಿರುವುದು ವಿಶೇಷ. ಹೊಸ ವಿಚಾರಧಾರೆಗಳೊಂದಿಗೆ ಸಂಸ್ಥೆ ಜಿಲ್ಲೆಗೆ ಮತ್ತಷ್ಟು ಕೀರ್ತಿ ತರಲಿ ಎಂದು ಆಶಿಸಿದರು.

ಸಂಸ್ಥೆಯ ಸ್ವಂತ ನಿವೇಶನದ ಬೇಡಿಕೆಯೂ ಅರ್ಥಪೂರ್ಣವಾಗಿದೆ. ಪ್ರಸ್ತುತ ಕಚೇರಿ ಎಪಿಎಂಸಿ ಆವರಣದಲ್ಲಿದ್ದು, ಕೌಶಲ್ಯಾಭಿವೃದ್ಧಿ ಚಟುವಟಿಕೆಗಳಿಗೆ ಸ್ವಂತ ಸ್ಥಳದ ಅಗತ್ಯವಿದೆ. ನೀತಿ ಸಂಹಿತೆ ಜಾರಿಯಲ್ಲಿರುವ ಹಿನ್ನೆಲೆಯಲ್ಲಿ ಯಾವುದೇ ಭರವಸೆ ನೀಡುವುದಿಲ್ಲ. ಆದರೆ ಸಂಸ್ಥೆಯ ಬೇಡಿಕೆಗಳನ್ನು ಪ್ರಾಮಾಣಿಕವಾಗಿ ಸರ್ಕಾರದ ಗಮನಕ್ಕೆ ತರುವುದಾಗಿ ಹೇಳಿದರು.

ವ್ಯಾಪಾರ ಮತ್ತು ಉದ್ಯಮಕ್ಕೆ ಮಾತ್ರ ಸೀಮಿತವಾಗದೆ ಪ್ರತಿ ವರ್ಷ ಸಾಧಕ ಉದ್ಯಮಿಗಳನ್ನು ಗುರುತಿಸಿ ಪ್ರಶಸ್ತಿ ನೀಡುತ್ತಿರುವ ಸಂಸ್ಥೆಯ ಕಾರ್ಯವನ್ನು ಜಿ.ಎಸ್. ಪಾಟೀಲ ಶ್ಲಾಘಿಸಿದರು. ಮಹಾರಾಷ್ಟ್ರದ ನಂತರ ಜಿಎಸ್‌ಟಿ ಸಂಗ್ರಹದಲ್ಲಿ ಕರ್ನಾಟಕ ದೇಶದಲ್ಲಿ ಎರಡನೇ ಸ್ಥಾನದಲ್ಲಿರುವುದು ಹೆಮ್ಮೆಯ ಸಂಗತಿ ಎಂದರು.

ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಮಾತನಾಡಿ, ಗುಡಿ ಕೈಗಾರಿಕೆ ಸೇರಿದಂತೆ ಜಿಲ್ಲೆಯ ವಿವಿಧ ಉತ್ಪನ್ನಗಳಿಗೆ ಮಾರುಕಟ್ಟೆ ಒದಗಿಸುವ ಉದ್ದೇಶದಿಂದ ಕಳೆದ 25 ವರ್ಷಗಳಿಂದ 'ಗದಗ ಉತ್ಸವ' ಆಯೋಜಿಸಲಾಗುತ್ತಿದೆ. ಆದರೆ ಶಾಶ್ವತ ವ್ಯಾಪಾರ ಮೇಳದ ಮೈದಾನದ ಕೊರತೆಯಿಂದಾಗಿ ಸಣ್ಣ ಕಲ್ಯಾಣ ಮಂಟಪಗಳಲ್ಲಿ 25ರಿಂದ 40 ಮಳಿಗೆಗಳಿಗೆ ಮಾತ್ರ ಸೀಮಿತವಾಗಬೇಕಾಗಿದೆ ಎಂದು ತಿಳಿಸಿದರು.

ಮಾಜಿ ಅಧ್ಯಕ್ಷ ಚಂದ್ರು ಬಾಳಿಹಳ್ಳಿಮಠ ಅವರು ಜಿ.ಎಸ್. ಪಾಟೀಲರ ಕುರಿತು ಅಭಿನಂದನಾ ಮಾತುಗಳನ್ನಾಡಿದರು. ಸಂಸ್ಥೆಯ ಗೌರವ ಕಾರ್ಯದರ್ಶಿ ಚನ್ನವೀರಪ್ಪ ಹುಣಶಿಕಟ್ಟಿ ನಿರೂಪಿಸಿ ವಂದಿಸಿದರು.

ಸಮಾರಂಭದಲ್ಲಿ ಪ್ರಭಣ್ಣ ಹುಣಶಿಕಟ್ಟಿ, ಐ.ಎಸ್. ಪಾಟೀಲ ಸೇರಿದಂತೆ ಸಂಸ್ಥೆಯ ಪದಾಧಿಕಾರಿಗಳು, ಮಾಜಿ ಅಧ್ಯಕ್ಷರು ಹಾಗೂ ಸದಸ್ಯರು ಪಾಲ್ಗೊಂಡಿದ್ದರು

---

### ದೇಶಪ್ರೇಮ ಬೆಳೆಸಿಕೊಂಡು ರಾಷ್ಟ್ರದ ಪ್ರಗತಿಗೆ ಶ್ರಮಿಸಿ: ಡಿ.ಕೆ. ಹೊನ್ನಪ್ಪನವರ

# ಸ್ವಾತಂತ್ರ್ಯ ಹೋರಾಟಗಾರರು ಯುವಜನತೆಗೆ ಆದರ್ಶರಾಗಬೇಕು

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿ ಪ್ರಾಣ ತ್ಯಾಗ ಮಾಡಿದ ದೇಶಭಕ್ತರು ಇಂದಿನ ಯುವಜನತೆಗೆ ಆದರ್ಶ ವ್ಯಕ್ತಿಗಳಾಗಬೇಕು. ಅವರ ತ್ಯಾಗ, ದೇಶಪ್ರೇಮ ಹಾಗೂ ಆದರ್ಶ ಗುಣಗಳನ್ನು ಮೈಗೂಡಿಸಿಕೊಂಡು ಯುವಕರು ರಾಷ್ಟ್ರದ ಪ್ರಗತಿಗೆ ಶ್ರಮಿಸಬೇಕು ಎಂದು ಧಾರವಾಡ ಕಾನೂನು ಮಹಾವಿದ್ಯಾಲಯದ ಸಿಂಡಿಕೇಟ್ ಸದಸ್ಯ ಡಿ.ಕೆ. ಹೊನ್ನಪ್ಪನವರ ಹೇಳಿದರು.

ತಾಲೂಕಿನ ರಾಮಗೇರಿ ಗ್ರಾಮದಲ್ಲಿ ಭಗತ್‌ಸಿಂಗ್ ಯುವಕ ಸಂಘ ಹಾಗೂ ದುರ್ಗಾಶಕ್ತಿ ಸತ್ಸಂಗದ ವತಿಯಿಂದ ಗ್ರಾಮ ದೇವತೆ ದೇವಸ್ಥಾನದಲ್ಲಿ ಬುಧವಾರ ಆಯೋಜಿಸಿದ್ದ 28ನೇ ಮಾಸಿಕ ಸತ್ಸಂಗ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಭಗತ್‌ಸಿಂಗ್, ಸಂಗೊಳ್ಳಿ ರಾಯಣ್ಣ, ಕಿತ್ತೂರು ರಾಣಿ ಚನ್ನಮ್ಮ ಹಾಗೂ ಸುಭಾಷ್‌ಚಂದ್ರ ಬೋಸ್ ಅವರಂತಹ ಮಹನೀಯರ ಆದರ್ಶ ಗುಣಗಳನ್ನು ಯುವಕರು ಬೆಳೆಸಿಕೊಳ್ಳಬೇಕು. ಎಲ್ಲಕ್ಕಿಂತ



ದೇಶವೇ ದೊಡ್ಡದು ಎಂಬ ಭಾವನೆ ಪ್ರತಿಯೊಬ್ಬರಲ್ಲೂ ಮೂಡಿದಾಗ ಮಾತ್ರ ರಾಷ್ಟ್ರದ ಅಭಿವೃದ್ಧಿ ಸಾಧ್ಯ ಎಂದು ಹೇಳಿದರು.

ಅಮೋಘಸ್ವಾಮಿ ಹಿರೇಮಠ ಅವರು ದೇಶಪ್ರೇಮಿ ಭಗತ್‌ಸಿಂಗ್ ಕುರಿತು ಉಪನ್ಯಾಸ ನೀಡಿದರು. ಇದೇ ವೇಳೆ ಶಿವಾನಂದ ತಡಾಳ ಹಾಗೂ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಪ್ರತಿಭಾನ್ವಿತ ವಿದ್ಯಾರ್ಥಿನಿಯರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಭಗತ್‌ಸಿಂಗ್ ಯುವಕ ಸಂಘದ ಅಧ್ಯಕ್ಷ ಶಿವರಾಜ ಸಿದ್ದಪ್ಪ ಕಾಳೆ, ಬಸಣ್ಣ ಬೆಟಗೇರಿ, ಶಂಕರಗೌಡ ಪಾಟೀಲ, ಚನ್ನಬಸಪ್ಪ ಲಿಂಗಶೆಟ್ಟಿ, ಜಗದೀಶ ಕುಮಸಿ, ಬಸವರಾಜ ಯರಗುಪ್ಪಿ, ಬಸವರಾಜ ಗಳಗನಾಥ, ಮಂಜುನಾಥ ಅಂಗಡಿ, ಗಂಗಮ್ಮ ಕಾಳೆ, ಲತಾ ಸಜ್ಜಗಾರ, ಸಾವಿತ್ರಿ ಪೂಜಾರ, ಮುತ್ತಕ್ಕ ಬೆಟಗೇರಿ, ಅಡಿವೆಕ್ಕ ಬೆಟಗೇರಿ, ಪುಷ್ಪಾ ದೇವೇಂದ್ರಪ್ಪ ಬೆಟಗೇರಿ, ಜಯಶ್ರೀ ಹರ್ತಿ, ಶಿವಲೀಲಾ ಪೂಜಾರ, ಎಸ್.ವೈ. ಬೆಟಗೇರಿ, ದತ್ತಪ್ಪ ದೊಡ್ಡಮನಿ, ಶೇಕಣ್ಣ ಕಾಳೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

---

# ಮಕ್ಕಳ ಭಾವಿ ಭವಿಷ್ಯಕ್ಕೆ ಅಬಾಕಸ್ ಸಹಕಾರಿ




> ಅಬಾಕಸ್ ಕಲಿಕೆ ಮಕ್ಕಳಲ್ಲಿ ಗಣಿತದ ವೇಗ ಮತ್ತು ಏಕಾಗ್ರತೆಯನ್ನು ಹೆಚ್ಚಿಸುವುದರ ಜತೆಗೆ ಅವರ ಒಟ್ಟಾರೆ ಬೌದ್ಧಿಕ ಬೆಳವಣಿಗೆಗೆ ಸಹಕಾರಿಯಾಗುತ್ತದೆ. ವಿಶೇಷವಾಗಿ ಗ್ರಾಮೀಣ ಮಕ್ಕಳಲ್ಲಿರುವ ಪ್ರತಿಭೆ ಹಾಗೂ ವಿಶಿಷ್ಟ ಕೌಶಲ್ಯಗಳನ್ನು ಬೆಳೆಸಲು ಇದು ಉತ್ತಮ ವೇದಿಕೆಯಾಗಿದೆ.
>
> **- ವಿದ್ಯಾವತಿ ಪಾಟೀಲ, ಅಬಾಕಸ್ ಅಕಾಡೆಮಿ ಸಂಸ್ಥಾಪಕಿ**

**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಮಕ್ಕಳ ಭಾವಿ ಭವಿಷ್ಯ ರೂಪಿಸುವಲ್ಲಿ ಅಬಾಕಸ್ ಕಲಿಕೆ ಸಹಕಾರಿಯಾಗಿದೆ ಎಂದು ಅಬಾಕಸ್ ಅಕಾಡೆಮಿ ಸಂಸ್ಥಾಪಕಿ ವಿದ್ಯಾವತಿ ಪಾಟೀಲ ಹೇಳಿದರು.

ಸಮೀಪದ ಕುರ್ತಕೋಟಿ ಗ್ರಾಮದ ಸಿಎಎಸ್ ಅಬಾಕಸ್ ಅಕಾಡೆಮಿ ವಿದ್ಯಾರ್ಥಿಗಳು ಚೆನ್ನೈನಲ್ಲಿ ನಡೆದ ಅಂತರರಾಷ್ಟ್ರೀಯ ಅಬಾಕಸ್ ಸ್ಪರ್ಧೆಯಲ್ಲಿ ಉತ್ತಮ ಪ್ರದರ್ಶನ ನೀಡಿ ಪ್ರಶಸ್ತಿ ಪಡೆದ ಹಿನ್ನೆಲೆಯಲ್ಲಿ ಅವರನ್ನು ಗೌರವಿಸಿ ಅವರು ಮಾತನಾಡಿದರು.

ಅಬಾಕಸ್ ಕೇವಲ ಗಣಿತದ ಲೆಕ್ಕಾಚಾರಗಳನ್ನು ವೇಗವಾಗಿ ಮಾಡುವುದಕ್ಕೆ ಸೀಮಿತವಾಗಿಲ್ಲ. ಮಕ್ಕಳ ಒಟ್ಟಾರೆ ಬೌದ್ಧಿಕ ಬೆಳವಣಿಗೆ, ಏಕಾಗ್ರತೆ ಹಾಗೂ ಗಣಿತ ವಿಷಯವನ್ನು ವೇಗವಾಗಿ ಕಲಿಯುವ ಸಾಮರ್ಥ್ಯವನ್ನು ಹೆಚ್ಚಿಸುವಲ್ಲಿಯೂ ಪ್ರಮುಖ ಪಾತ್ರ ವಹಿಸುತ್ತದೆ. ಗ್ರಾಮೀಣ ಪ್ರದೇಶದ ಮಕ್ಕಳಲ್ಲಿರುವ ವಿಶಿಷ್ಟ ಕೌಶಲ್ಯಗಳನ್ನು ಬೆಳೆಸಲು ಹಾಗೂ ಅವರ ಬೌದ್ಧಿಕ ಸಾಮರ್ಥ್ಯವನ್ನು ಮತ್ತಷ್ಟು ಹೆಚ್ಚಿಸಲು ಅಬಾಕಸ್ ಕಲಿಕೆ ಸಹಕಾರಿಯಾಗಿದೆ ಎಂದು ಹೇಳಿದರು.

ಚೆನ್ನೈನಲ್ಲಿ ನಡೆದ ಅಂತರರಾಷ್ಟ್ರೀಯ ಅಬಾಕಸ್ ಸ್ಪರ್ಧೆಯಲ್ಲಿ ಉತ್ತಮ ಪ್ರದರ್ಶನ ನೀಡಿ ಪ್ರಶಸ್ತಿ ಪಡೆದ ಸಿದ್ದರಾಮೇಶ ಬಳಿಗೇರ, ಗಗನ ಇನಾಮತಿ, ಅಜಿತ ಹೆಬಸೂರಮಠ, ಶ್ರವಣ ಸುಂಕದ, ಬಸವರಾಜ ಪರಪ್ಪನವರ, ಪ್ರಭುದೇವ ಬಳಿಗೇರ, ಶಿವಾನಂದ ದನದಮನಿ, ಆದ್ಯಾ ಯಲಿಗಾರಮಠ ಹಾಗೂ ನೀವೇದಾ ಆರ್. ಅವರನ್ನು ಈ ಸಂದರ್ಭದಲ್ಲಿ ಗೌರವಿಸಿ ಸನ್ಮಾನಿಸಲಾಯಿತು.

---

# ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ಶಿಗ್ಲಿ ಶಾಲೆ ವಿದ್ಯಾರ್ಥಿಗಳ ಸಾಧನೆ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶಿರಹಟ್ಟಿಯಲ್ಲಿ ಬುಧವಾರ ನಡೆದ ಪ್ರೌಢಶಾಲೆಗಳ ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ಸಮೀಪದ ಶಿಗ್ಲಿ ಗ್ರಾಮದ ಎಸ್.ಎಸ್. ಕೂಡ್ಲಮಠ ಪ್ರೌಢಶಾಲೆಯ ವಿದ್ಯಾರ್ಥಿಗಳು ವಿವಿಧ ಕ್ರೀಡಾ ಸ್ಪರ್ಧೆಗಳಲ್ಲಿ ಗಮನಾರ್ಹ ಸಾಧನೆ ಮಾಡಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಕಿರಣ್ ಉಂಡಿ ಎತ್ತರ ಜಿಗಿತದಲ್ಲಿ ಪ್ರಥಮ ಸ್ಥಾನ, ಅಜಾದ್ ಸೂರಣಗಿ ಸರಪಳಿ ಗುಂಡು ಎಸೆತ ಹಾಗೂ ಡಿಸ್ಕಸ್ ಥ್ರೋದಲ್ಲಿ ಪ್ರಥಮ ಸ್ಥಾನ, ಅಲ್ತಾಫ್ ಸುಂಕದ ಹರ್ಡಲ್ಸ್‌ನಲ್ಲಿ ಪ್ರಥಮ ಸ್ಥಾನ, ರೇಣುಕಾ ಹುಳ್ಳಿಕೊಪ್ಪ ಸರಪಳಿ ಗುಂಡು ಎಸೆತದಲ್ಲಿ ಪ್ರಥಮ ಸ್ಥಾನ, ಎಲ್ಲಮ್ಮ ಹಡಪದ 3000 ಮೀಟರ್ ಓಟದಲ್ಲಿ ಪ್ರಥಮ ಸ್ಥಾನ ಹಾಗೂ ವಿವೇಕ್ ಬಾರ್ಕಿ 3000 ಮೀಟರ್ ಓಟದಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ.

ಇದೇ ರೀತಿ ಶಿವರಾಜ್ ವಾಲಿಕಾರ್ ಜಾವೆಲಿನ್ ಎಸೆತದಲ್ಲಿ ದ್ವಿತೀಯ ಸ್ಥಾನ, ಫಯಾಜ್ ನದಾಫ್ ಸರಪಳಿ ಗುಂಡು ಎಸೆತದಲ್ಲಿ ದ್ವಿತೀಯ ಸ್ಥಾನ, ಸುಮಾ ವಾಲ್ಮೀಕಿ ಬರ್ಚಿ ಎಸೆತದಲ್ಲಿ ದ್ವಿತೀಯ ಸ್ಥಾನ, ಕಲ್ಪನಾ ಲಮಾಣಿ 1500 ಮೀಟರ್ ಓಟದಲ್ಲಿ ದ್ವಿತೀಯ ಸ್ಥಾನ ಹಾಗೂ ಸರಸ್ವತಿ ನಾಯಕ್ 200 ಮೀಟರ್ ಓಟದಲ್ಲಿ ದ್ವಿತೀಯ ಸ್ಥಾನ ಪಡೆದು ಜಿಲ್ಲಾ ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.

ವಿದ್ಯಾರ್ಥಿಗಳ ಸಾಧನೆಗೆ ಗ್ರಾಮಭಾರತಿ ಶಿಕ್ಷಣ ಸಮಿತಿಯ ಆಡಳಿತ ಮಂಡಳಿ ಚೇರಮನ್ ಎಸ್.ಪಿ. ಬಳಿಗಾರ, ಗೌರವ ಕಾರ್ಯದರ್ಶಿ ಸಿ.ಎಂ. ರಾಗಿ ಹಾಗೂ ಕಾರ್ಯಕಾರಿ ಮಂಡಳಿಯ ಸರ್ವ ಸದಸ್ಯರು, ಅಜೀವ ಸದಸ್ಯರು, ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕರು ಮತ್ತು ತರಬೇತಿದಾರರು ಅಭಿನಂದನೆ ಸಲ್ಲಿಸಿದ್ದಾರೆ.

ಗುಳೆ ತಪ್ಪಿಸಲು ಉದ್ಯೋಗ ಸೃಷ್ಟಿಸಿ, ಹಿಂಗಾರು ಪೂರ್ವಸಿದ್ಧತೆಗೆ ಡಾ. ವೆಂಕಟೇಶ್ ಸೂಚನೆ

# ಬರ ನಿರ್ವಹಣೆಗೆ ಜಿಲ್ಲಾಡಳಿತ ಸಜ್ಜಾಗಲಿ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ನಿಭಾಯಿಸುವುದರ ಜೊತೆಗೆ ಜನರು ಉದ್ಯೋಗಕ್ಕಾಗಿ ಗುಳೆ ಹೋಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಹಾಗೂ ಸಹಕಾರ ಸಂಘಗಳ ನಿಬಂಧಕ ಡಾ. ಎಂ.ವಿ. ವೆಂಕಟೇಶ್ ಅಧಿಕಾರಿಗಳಿಗೆ ಸೂಚಿಸಿದರು. ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬುಧವಾರ ನಡೆದ ಜಿಲ್ಲೆಯ ಬರ ಪರಿಸ್ಥಿತಿ ಹಾಗೂ ವಿವಿಧ ಇಲಾಖೆಗಳ ಪ್ರಗತಿ ಕುರಿತು ವಿಡಿಯೋ ಸಂವಾದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಂಬರುವ ಹಿಂಗಾರು ಹಂಗಾಮಿಗೆ ಅಗತ್ಯ ಪೂರ್ವಸಿದ್ಧತೆ ಮಾಡಿಕೊಳ್ಳಬೇಕು. ಬರದಿಂದ ಕೃಷಿ ಚಟುವಟಿಕೆಗಳಿಗೆ ತೊಂದರೆಯಾದ ಸಂದರ್ಭದಲ್ಲಿ ರೇಷ್ಮೆ ಕೃಷಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ಮನರೇಗಾ ಯೋಜನೆಯಡಿ ಒಂದು ಅಮೃತ ಸರೋವರ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಸಮಾಜ ಕಲ್ಯಾಣ, ಅಲ್ಪಸಂಖ್ಯಾತರ ಹಾಗೂ ಹಿಂದುಳಿದ ವರ್ಗಗಳ ವಸತಿ ನಿಲಯಗಳಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಫಲಿತಾಂಶ ಸುಧಾರಣೆಗೆ ವಿಶೇಷ ಗಮನ ಹರಿಸಬೇಕು.

ಅಂಗನವಾಡಿ ಮಕ್ಕಳಿಗೆ ಪೌಷ್ಟಿಕ ಆಹಾರದ ಜತೆಗೆ ಔಪಚಾರಿಕ ಶಿಕ್ಷಣ ಒದಗಿಸಬೇಕು. ಎಸ್‌ಸಿಪಿ ಹಾಗೂ ಟಿಎಸ್‌ಪಿ ಯೋಜನೆಗಳಲ್ಲಿ ಫಲಾನುಭವಿಗಳ ಆಯ್ಕೆ ಪಾರದರ್ಶಕವಾಗಿರಬೇಕು.

ಬಿಡುಗಡೆಯಾದ ಅನುದಾನ ಯಾವುದೇ ಕಾರಣಕ್ಕೂ ಲ್ಯಾಪ್ಸ್ ಆಗದಂತೆ ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.



**ಡಿಸೆಂಬರ್‌ವರೆಗೆ ಕುಡಿಯುವ ನೀರಿನ ಕೊರತೆ ಇಲ್ಲ**

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮುಕುಲ್ ಜೈನ್ ಮಾತನಾಡಿ, ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದಾದ 59 ಗ್ರಾಮಗಳನ್ನು ಗುರುತಿಸಲಾಗಿದೆ. ಎರಡು ಡಿಬಿಒಟಿ ಹಾಗೂ 10 ಎಂವಿಎಸ್ ಯೋಜನೆಗಳ ಮೂಲಕ ನದಿ ಮೂಲದಿಂದ ಗ್ರಾಮೀಣ ಪ್ರದೇಶಗಳಿಗೆ ನೀರು ಪೂರೈಸಲಾಗುತ್ತಿದ್ದು, ಪ್ರಸ್ತುತ ಲಭ್ಯವಿರುವ ನೀರು ಡಿಸೆಂಬರ್ ಅಂತ್ಯದವರೆಗೆ ಸಾಕಾಗಲಿದೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಉಸ್ತುವಾರಿ ಕಾರ್ಯದರ್ಶಿಗಳು ನೀಡಿರುವ ಸೂಚನೆಗಳನ್ನು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಎಂದರು.

**2.33 ಲಕ್ಷ ಕೂಲಿಕಾರರ ನೋಂದಣಿ**

ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಮಾತ ನಾಡಿ, ಜಿಲ್ಲೆಯಲ್ಲಿ ವಿಬಿಜಿ– ರಾಮ್–ಜಿ ಯೋಜನೆಯಡಿ 2,33,844 ಕೂಲಿಕಾರರು ನೋಂದಣಿ ಯಾಗಿದ್ದಾರೆ. 8,044 ಮನರೇಗಾ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ಮಾಹಿತಿ ನೀಡಿದರು.

**1.25 ಲಕ್ಷ ಹೆಕ್ಟೇರ್‌ಗೂ ಅಧಿಕ ಬೆಳೆ ಹಾನಿ**

ಕೃಷಿ ಇಲಾಖೆ ಜಂಟಿ ನಿರ್ದೇಶಕಿ ಚೇತನಾ ಪಾಟೀಲ ಮಾತನಾಡಿ, ಮುಂಗಾರು ಹಂಗಾಮಿನಲ್ಲಿ 1,18,697.8 ಹೆಕ್ಟೇರ್ ಕೃಷಿ ಪ್ರದೇಶ ಹಾಗೂ 6,651.34 ಹೆಕ್ಟೇರ್ ತೋಟಗಾರಿಕಾ ಪ್ರದೇಶ ಸೇರಿದಂತೆ ಒಟ್ಟು 1,25,349.14 ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದೆ. ಎನ್‌ಡಿಆರ್‌ಎಫ್ ಹಾಗೂ ಎಸ್‌ಡಿಆರ್‌ಎಫ್ ಅಡಿ ರೂ. 11,574.46 ಲಕ್ಷ ನೆರವು ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದೆ. ಜಿಲ್ಲೆಯಲ್ಲಿ ರಸಗೊಬ್ಬರದ ಕೊರತೆ ಇಲ್ಲ. ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ 1,79,116 ರೈತರು ನೋಂದಣಿಯಾಗಿದ್ದಾರೆ ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ಸ್ವಾಗತಿಸಿದರು. ಜಿ.ಪಂ. ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ, ಯೋಜನಾ ನಿರ್ದೇಶಕ ಎಂ.ಎ. ಚಳಗೇರಿ, ಬಸನಗೌಡ ಕೋಟೂರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡು ಪ್ರಗತಿ ವಿವರ ನೀಡಿದರು.

100 ಅಡಿ ಅಗಲದ ರಸ್ತೆ, 2 ಕಿ.ಮೀ. ಪ್ರಭಾವ ವಲಯ | ಜಮೀನು ಭೂಸ್ವಾಧೀನಕ್ಕೆ ರೈತರ ಆತಂಕ

# ಮುಳಗುಂದ ಸುತ್ತ 'ರಿಂಗ್ ರೋಡ್'ಗೆ ಗ್ರೀನ್ ಸಿಗ್ನಲ್

**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಸಣ್ಣ ಮತ್ತು ಮಧ್ಯಮ ಪಟ್ಟಣಗಳಲ್ಲಿನ ಸಂಚಾರ ದಟ್ಟಣೆ ನಿಯಂತ್ರಿಸುವ ಉದ್ದೇಶದಿಂದ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಮೂಲಕ ಮುಳಗುಂದ ಪಟ್ಟಣದ ಸುತ್ತ ವರ್ತುಲ ರಸ್ತೆ ನಿರ್ಮಿಸಲು ರಾಜ್ಯ ಸರ್ಕಾರ ಅ.29ರಂದು ಅಧಿಕೃತ ಅಧಿಸೂಚನೆ ಹೊರಡಿಸಿದೆ.

ರಾಜ್ಯದ 108 ಸಣ್ಣ ಹಾಗೂ ಮಧ್ಯಮ ಪಟ್ಟಣಗಳಲ್ಲಿ ಜಿಐಎಸ್ ಆಧಾರಿತ ರೋಡ್ ನೆಟ್‌ವರ್ಕಿಂಗ್ ಗ್ರಿಡ್ ಪ್ಲಾನ್ ಅಡಿಯಲ್ಲಿ ಸಂಚಾರ ದಟ್ಟಣೆ ನಿಯಂತ್ರಿಸಲು ಸರ್ಕಾರ ಕ್ರಮ ಕೈಗೊಂಡಿದೆ.

ಇದರ ಅಡಿಯಲ್ಲಿ ಜಿಲ್ಲೆಯ ಮುಳಗುಂದ, ಮುಂಡರಗಿ, ನರೇಗಲ್ ಹಾಗೂ ಗಜೇಂದ್ರಗಡ ಪಟ್ಟಣಗಳಲ್ಲಿ ವರ್ತುಲ ರಸ್ತೆ ನಿರ್ಮಾಣವಾಗಲಿದೆ.

ನಿಯೋಜಿತ ವರ್ತುಲ ರಸ್ತೆಯು 100 ಅಡಿ ಅಗಲ ಹೊಂದಿರಲಿದ್ದು, ರಸ್ತೆಯ ಎರಡೂ ಬದಿಗಳಲ್ಲಿ ತಲಾ ಎರಡು ಕಿ.ಮೀ. ವ್ಯಾಪ್ತಿಯನ್ನು ಪ್ರಭಾವ ವಲಯವಾಗಿ ಒಳಗೊಂಡಿರಲಿದೆ.

ಮುಳಗುಂದ ಪಟ್ಟಣವನ್ನು ಕೇಂದ್ರವಾಗಿಟ್ಟುಕೊಂಡು ಪಟ್ಟಣದ ಸುತ್ತಲಿನ ಶಿರಹಟ್ಟಿ, ಮಾಗಡಿ, ಖಾನಾಪುರ, ಹೋಳಲಾಪುರ, ಮಲ್ಲಸಮುದ್ರ, ಅಸುಂಡಿ, ಚಿಂಚಲಿ ಹಾಗೂ ಯಳವತ್ತಿ ಗ್ರಾಮಗಳನ್ನು ಒಳಗೊಂಡು ವೃತ್ತಾಕಾರವಾಗಿ ವರ್ತುಲ ರಸ್ತೆ ನಿರ್ಮಾಣವಾಗಲಿದೆ.




**ಸಂಪರ್ಕ ಹಾಗೂ ಸೌಕರ್ಯ ಹೆಚ್ಚಳ**

ವರ್ತುಲ ರಸ್ತೆ ನಿರ್ಮಾಣದಿಂದ ಪ್ರತಿಯೊಂದು ಹಳ್ಳಿಗಳ ಸಂಪರ್ಕ ರಸ್ತೆ ಪಟ್ಟಣಕ್ಕೆ ಸಂಪರ್ಕ ಕಲ್ಪಿಸಲು ಸಹಕಾರಿಯಾಗುವುದರ ಜೊತೆಗೆ ಪಟ್ಟಣದ ಸೌಕರ್ಯವೂ ಹೆಚ್ಚಲಿದೆ. ಇದರಿಂದ ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಸಹಾಯಕ ನಿರ್ದೇಶಕಿ ಬಸವಂತಿ ಪಾಟೀಲ ತಿಳಿಸಿದ್ದಾರೆ.

**ರಸ್ತೆಗಾಗಿ ಜಮೀನು ಭೂಸ್ವಾಧೀನ ಸಾಧ್ಯತೆ**

ಮುಳಗುಂದ ಸಮೀಪದ ಅಸುಂಡಿ, ಮಲ್ಲಸಮುದ್ರ, ಶಿರಹಟ್ಟಿ, ಖಾನಾಪುರ, ಮಾಗಡಿ, ಹೋಳಲಾಪುರ, ಯಳವತ್ತಿ ಹಾಗೂ ಚಿಂಚಲಿ ಗ್ರಾಮಗಳ ವಿವಿಧ ಜಮೀನುಗಳನ್ನು ವರ್ತುಲ ರಸ್ತೆ ನಿರ್ಮಾಣಕ್ಕಾಗಿ ಭೂಸ್ವಾಧೀನ ಮಾಡಿಕೊಳ್ಳುವ ಸಾಧ್ಯತೆ ಇದೆ.

ಮುಳಗುಂದ ಪಟ್ಟಣ ಪಂಚಾಯಿತಿ ಸೂಚನಾ ಫಲಕದಲ್ಲಿ ವರ್ತುಲ ರಸ್ತೆಯ ನಕ್ಷೆ ಹಾಗೂ ನಿಬಂಧನೆಗಳನ್ನು ಒಳಗೊಂಡ ಸರ್ಕಾರದ ಆದೇಶದ ಪ್ರತಿಗಳನ್ನು ಪ್ರಕಟಿಸಲಾಗಿದೆ.

ವರ್ತುಲ ರಸ್ತೆ ಹಾದುಹೋಗುವ ಸುತ್ತಲಿನ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೂ ಅಧಿಸೂಚನೆಯ ಪ್ರತಿಗಳನ್ನು ರವಾನಿಸಲಾಗಿದ್ದು, ನಿಯೋಜಿತ ನಕ್ಷೆಯನ್ನು ಸಾರ್ವಜನಿಕರಿಗೆ ತಿಳಿಸುವಂತೆ ಸೂಚಿಸಲಾಗಿದೆ.

ವರ್ತುಲ ರಸ್ತೆ ನಿರ್ಮಾಣ ಕುರಿತು ಸಲಹೆ, ಸೂಚನೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅಧಿಸೂಚನೆ ಹೊರಡಿಸಿದ ಎರಡು ತಿಂಗಳೊಳಗೆ ಸಾರ್ವಜನಿಕರು ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಗೆ ಲಿಖಿತವಾಗಿ ಸಲ್ಲಿಸಬಹುದು ಎಂದು ತಿಳಿಸಲಾಗಿದೆ.

**ಭೂಸ್ವಾಧೀನಕ್ಕೆ ರೈತರ ಆತಂಕ**

ಮುಳಗುಂದ ಪಟ್ಟಣದ ಸುತ್ತ ವರ್ತುಲ ರಸ್ತೆ ನಿರ್ಮಾಣಕ್ಕಾಗಿ ಕೃಷಿ ಜಮೀನು ಭೂಸ್ವಾಧೀನಕ್ಕೆ ಒಳಪಡಲಿದೆ. ರಸ್ತೆಯ ಎರಡೂ ಬದಿಗಳಲ್ಲಿ ತಲಾ ಎರಡು ಕಿ.ಮೀ. ವ್ಯಾಪ್ತಿಯ ಜಮೀನುಗಳನ್ನು ಪ್ರಭಾವ ವಲಯವಾಗಿ ಗುರುತಿಸಲಾಗಿದ್ದು, ಈ ಜಮೀನನ್ನು ಅನ್ಯ ಉದ್ದೇಶಕ್ಕೆ ಬಳಸಲು ಸಾಧ್ಯವಾಗುವುದಿಲ್ಲ.

ಕೃಷಿಯೇತರ ಜಮೀನನ್ನಾಗಿ ಪರಿವರ್ತಿಸಲೂ ಸಾಧ್ಯವಾಗುವುದಿಲ್ಲ ಎಂಬುದು ರೈತರ ಆತಂಕ ಎಂದು ರೈತ ಸಂಘದ ಅಧ್ಯಕ್ಷ ದೇವಪ್ಪ ಅಣ್ಣಿಗೇರಿ ತಿಳಿಸಿದ್ದಾರೆ.

# ಇಂದು ರಾಜ್ಯಾದ್ಯಂತ 'ತ್ರಿಕಾರಂ' ತೆರೆಗೆ!

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಸ್ಯಾಂಡಲ್‌ವುಡ್‌ನಲ್ಲಿ ಹೊಸತನದ ನಿರೀಕ್ಷೆ ಮೂಡಿಸಿರುವ 'ತ್ರಿಕಾರಂ' ಸಿನಿಮಾ ಅ.2ರಂದು ರಾಜ್ಯಾದ್ಯಂತ ತೆರೆಗೆ ಬರಲಿದೆ.

ಚಿತ್ರತಂಡ ಎರಡು ವರ್ಷಗಳ ಸತತ ಪರಿಶ್ರಮದಿಂದ ಸಿನಿಮಾವನ್ನು ರೂಪಿಸಿದ್ದು, ಪ್ರತಿಯೊಬ್ಬ ಪ್ರೇಕ್ಷಕರ ಮನಸ್ಸಿಗೆ ತಟ್ಟುವ, ಭಾವನೆಗಳನ್ನು ಮೂಡಿಸುವ ಹಾಗೂ ಪ್ರೇಕ್ಷಕರಿಗೆ ಇಷ್ಟವಾಗುವ ಎಲ್ಲ ಅಂಶಗಳನ್ನು ಒಳಗೊಂಡಿದೆ ಎಂದು ಚಿತ್ರದ ನಿರ್ದೇಶಕ ದಿಲೀಪ್ ಕುಮಾರ್ ಜೆ.ಆರ್. ತಿಳಿಸಿದ್ದಾರೆ. ಕುಟುಂಬ ಸಮೇತ ವೀಕ್ಷಿಸಬಹುದಾದ ಸಿನಿಮಾವಾಗಿದೆ. ಪ್ರೇಕ್ಷಕರು ಚಿತ್ರಮಂದಿರಕ್ಕೆ ಆಗಮಿಸಿ ಸಿನಿಮಾ ವೀಕ್ಷಿಸುವ ಮೂಲಕ ಪ್ರೋತ್ಸಾಹಿಸಬೇಕು ಎಂದು ಅವರು ಮನವಿ ಮಾಡಿದರು. ನಾಯಕ ನಟ ಹರ್ಷವರ್ಧನ್ ಮಾತನಾಡಿ, ನಿರ್ಮಾಪಕ ಜಿ. ಗಣೇಶ ಮೂರ್ತಿ ಅವರು ಸಿನಿಮಾಕ್ಕೆ ಯಾವುದೇ ಕೊರತೆಯಾಗದಂತೆ ಕಾಳಜಿಯಿಂದ ನಿರ್ಮಾಣ ಮಾಡಿದ್ದಾರೆ. ನಿರ್ದೇಶಕ ದಿಲೀಪ್ ಕುಮಾರ್ ಜೆ.ಆರ್. ಅವರು ಅದ್ಭುತ ಕಥೆಯನ್ನು ಹೆಣೆದು, ತಮ್ಮ ಶಕ್ತಿ ಮತ್ತು ಸಾಮರ್ಥ್ಯವನ್ನು ಬಳಸಿಕೊಂಡು ಸಿನಿಮಾ ರೂಪಿಸಿದ್ದಾರೆ ಎಂದು ಹೇಳಿದರು.



ಅಡುಗೆಮನೆ ಔಷಧಾಲಯವಾಗಲಿ: ಶಾಂತಲಿಂಗ ಶ್ರೀಗಳು

# ಹೃದಯದ ಆರೋಗ್ಯಕ್ಕೆ ಉತ್ತಮ ಜೀವನಶೈಲಿ ಅಗತ್ಯ

**ವಿಜಯಸಾಕ್ಷಿ ಸುದ್ದಿ, ಗದಗ**

ಮನುಷ್ಯ ಜೀವನಪೂರ್ತಿ ಆರೋಗ್ಯದಿಂದ ಬದುಕಲು ಆಧ್ಯಾತ್ಮವನ್ನು ಬದುಕಿನ ಭಾಗವನ್ನಾಗಿ ಸ್ವೀಕರಿಸಬೇಕು. ಇದರಿಂದ ಒತ್ತಡ ಕಡಿಮೆಯಾಗಿ ನೆಮ್ಮದಿಯ ಜೀವನ ನಡೆಸಲು ಸಾಧ್ಯ ಎಂದು ಭೈರನಟ್ಟಿ ಹಾಗೂ ಶಿರೋಳ ಮಠದ ಪೂಜ್ಯ ಶಾಂತಲಿಂಗ ಮಹಾಸ್ವಾಮಿಗಳು ಹೇಳಿದರು.

ನಗರದಲ್ಲಿ ಲಿಂಗಾಯತ ಪ್ರಗತಿಶೀಲ ಸಂಘದ 2817ನೇ ಶಿವಾನುಭವದ ಸಮ್ಮುಖ ವಹಿಸಿ ಮಾತನಾಡಿದ ಅವರು, ಹೃದಯದ ಬಡಿತ ಸರಿಯಾಗಿದ್ದರೆ ಬದುಕಿನ ಲಯವೂ ಸರಿಯಾಗಿರುತ್ತದೆ. ಒತ್ತಡದ ನಡುವೆಯೂ ವ್ಯಾಯಾಮ, ಆಧ್ಯಾತ್ಮ, ಪೌಷ್ಟಿಕ ಆಹಾರ ಹಾಗೂ ಉತ್ತಮ ಜೀವನಶೈಲಿಗೆ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

"ಪ್ರತಿ ಮನೆಯ ಅಡುಗೆಮನೆಯೂ ಔಷಧಾಲಯದಂತಿರಬೇಕು. ನಾವು ಸೇವಿಸುವ ಆಹಾರವೇ ಔಷಧವಾಗಬೇಕು ಹೊರತು ಔಷಧಗಳನ್ನು ಆಹಾರದಂತೆ ಸೇವಿಸುವ ಪರಿಸ್ಥಿತಿ ಬರಬಾರದು" ಎಂದು ಶಾಂತಲಿಂಗ ಶ್ರೀಗಳು ಹೇಳಿದರು.

ಶ್ರೀಮಠದ ಪರಮಭಕ್ತರಾಗಿದ್ದ ಡಾ. ಆನಂದ ಪಾಂಡುರಂಗಿ ಅವರನ್ನು ಸ್ಮರಿಸಿದ ಅವರು, ಮಠದ ವಿವಿಧ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಭಾಗವಹಿಸುತ್ತಿದ್ದರು. ರೋಗಿಗಳೊಂದಿಗೆ ಆತ್ಮೀಯವಾಗಿ ಮಾತನಾಡಿ ಅವರಿಗೆ ಧೈರ್ಯ ತುಂಬುತ್ತಿದ್ದ ಅವರ ಅಗಲಿಕೆ ವೈದ್ಯಲೋಕಕ್ಕೆ ತುಂಬಲಾರದ ನಷ್ಟವಾಗಿದೆ ಎಂದರು.



ಗದಗದ ಕೆ.ಎಚ್. ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಧ್ಯಾಪಕ ಡಾ. ಶಂಭು ಉಮೇಶಪುರದ ಅವರು 'ಹೃದಯ ರಕ್ಷಣೆ ಹಾಗೂ ಹೃದಯಾಘಾತದಿಂದ ಮುನ್ನೆಚ್ಚರಿಕೆ' ವಿಷಯ ಕುರಿತು ವಿಡಿಯೋ ಪ್ರಾತ್ಯಕ್ಷಿಕೆ ಮೂಲಕ ಮಾಹಿತಿ ನೀಡಿದರು. ಹೃದಯದ ಕಾರ್ಯವೈಖರಿ, ಅಸಮರ್ಪಕ ಜೀವನಶೈಲಿಯಿಂದ ಉಂಟಾಗುವ ಅಪಾಯಗಳು ಹಾಗೂ ಹೃದಯವನ್ನು ಸಂರಕ್ಷಿಸುವ ವಿಧಾನಗಳ ಕುರಿತು ವಿವರಿಸಿದರು.

ಹೃದ್ರೋಗ ತಜ್ಞ ಡಾ. ಸಂಜೀವ ಚಿಂತಾಮಣಿ ಅವರು ಹೃದಯಾಘಾತದ ಲಕ್ಷಣಗಳು, ತುರ್ತು ಚಿಕಿತ್ಸೆ ಹಾಗೂ ಔಷಧ ಸೇವನೆ ಕುರಿತು ಮಾಹಿತಿ ನೀಡಿದರು. ಧೂಮಪಾನ, ಮದ್ಯಪಾನ, ಜಂಕ್ ಫುಡ್ ಹಾಗೂ ಅಸಮರ್ಪಕ ಜೀವನಶೈಲಿಯಿಂದ ಹೃದಯ ಸಂಬಂಧಿ ಸಮಸ್ಯೆಗಳು ಹೆಚ್ಚಾಗುತ್ತಿವೆ. ಹೀಗಾಗಿ ಆರೋಗ್ಯಕರ ಜೀವನಶೈಲಿಯನ್ನು ರೂಢಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಗದಗ ಪರಿಸರದಲ್ಲಿ ನಾಲ್ಕು ಕ್ಯಾಥ್‌ಲ್ಯಾಬ್‌ಗಳಿದ್ದರೂ ಜನಸಂಖ್ಯೆ ಹಾಗೂ ರೋಗಿಗಳ ಸಂಖ್ಯೆಗೆ ಹೋಲಿಸಿದರೆ ಇನ್ನಷ್ಟು ಸೌಲಭ್ಯಗಳ ಅಗತ್ಯವಿದೆ ಎಂದು ಅವರು ಅಭಿಪ್ರಾಯಪಟ್ಟರು.

ಶಿವಾನುಭವದಲ್ಲಿ ಲಿಂಗಾಯತ ಪ್ರಗತಿಶೀಲ ಸಂಘದ ಮಾಜಿ ಅಧ್ಯಕ್ಷ ಮಲ್ಲಿಕಾರ್ಜುನ ಚನ್ನಬಸಪ್ಪ ಐಲಿ ಅವರನ್ನು ಗೌರವಿಸಲಾಯಿತು. ಗದುಗಿನ ಬಸವದಳದ ಮಾಜಿ ಅಧ್ಯಕ್ಷ ವಿ.ಕೆ. ಕರಿಗೌಡರ, ಬಸವ ಸಮುದಾಯ ಭವನದ ಕಟ್ಟಡ ಸಮಿತಿ ಅಧ್ಯಕ್ಷ ಎಂ.ಬಿ. ಲಿಂಗದಾಳ ಹಾಗೂ ಬಸವದಳದ ನೂತನ ಅಧ್ಯಕ್ಷ ಪ್ರಕಾಶ ಅಸುಂಡಿ ಅವರನ್ನು ಸನ್ಮಾನಿಸಲಾಯಿತು.

ವಚನ ಸಂಗೀತವನ್ನು ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ ಸುತಾರ, ಧರ್ಮಗ್ರಂಥ ಪಠಣವನ್ನು ಅಭಿಷೇಕ್ ಬಿ. ಹುಬ್ಬಳ್ಳಿ, ವಚನ ಚಿಂತನವನ್ನು ಚಂದನ ಬಳಿಗೇರ ಹಾಗೂ ದಾಸೋಹ ಸೇವೆಯನ್ನು ಕೆ.ವಿ.ಎಸ್.ಆರ್. ಕಾಲೇಜಿನ ನಿವೃತ್ತ ಪ್ರಾಚಾರ್ಯ ವಿ.ಎಸ್. ದಲಾಲಿ ನೆರವೇರಿಸಿದರು. ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಡಾ. ಉಮೇಶ ಪುರದ ಸ್ವಾಗತಿಸಿದರು. ಶಿವಾನುಭವ ಸಮಿತಿ ಅಧ್ಯಕ್ಷ ಡಾ. ರಮೇಶ ಕಲ್ಲನಗೌಡರ ನಿರೂಪಿಸಿದರು. ಉಪಾಧ್ಯಕ್ಷ ಪ್ರಭು ಗಂಜಿಹಾಳ, ಸುರೇಖಾ ಪಿಳ್ಳಿ, ಕಾರ್ಯದರ್ಶಿ ಸಿದ್ಧರಾಮ ಪಟ್ಟೇದ, ಸಹಕಾರ್ಯದರ್ಶಿ ಪ್ರತಿಭಾ ಬಡ್ನಿ, ಕೋಶಾಧ್ಯಕ್ಷ ವೀರಣ್ಣ ಗೋಟಡಕಿ ಸೇರಿದಂತೆ ಶ್ರೀಮಠದ ಸದ್ಭಕ್ತರು ಉಪಸ್ಥಿತರಿದ್ದರು.

> ಪ್ರತಿ ಮನೆಯ ಅಡುಗೆಮನೆಯೂ ಔಷಧಾಲಯದಂತಿರಬೇಕು. ಆರೋಗ್ಯಕರ ಆಹಾರ, ವ್ಯಾಯಾಮ, ಆಧ್ಯಾತ್ಮ ಹಾಗೂ ಉತ್ತಮ ಜೀವನಶೈಲಿಗೆ ಆದ್ಯತೆ ನೀಡಿದರೆ ಒತ್ತಡಮುಕ್ತ ಹಾಗೂ ಆರೋಗ್ಯಕರ ಬದುಕು ನಡೆಸಬಹುದು.
> – ಶಾಂತಲಿಂಗ ಮಹಾಸ್ವಾಮಿಗಳು, ಭೈರನಟ್ಟಿ ಹಾಗೂ ಶಿರೋಳ ಮಠ

# ಅಮ್ಮಾ... ನಿನ್ನ ನೆನಪಿನಲ್ಲಿ

ದಿ. ಶೋಭಾ ಕೋಂ. ಗುರುಬಸಪ್ಪ ಮಾಗಡಿ



ಅಮ್ಮಾ...
ನೀನು ನಮ್ಮನ್ನು ಅಗಲಿ ಎರಡು ವರ್ಷಗಳು ಕಳೆದಿವೆ.
ಕಾಲ ಕಳೆಯುತ್ತಿದ್ದರೂ,
ನಿನ್ನ ನೆನಪು ಮಾತ್ರ ನಮ್ಮ ಮನದಿಂದ ಮಾಸಿಲ್ಲ.

ನಿನ್ನ ಮಮತೆಯ ಸ್ಪರ್ಶ,
ನಿನ್ನ ಪ್ರೀತಿಯ ಮಾತು,
ನಿನ್ನ ನಗುಮುಖ...
ಇಂದಿಗೂ ನಮ್ಮ ಕಣ್ಣಮುಂದೆ ಅಚ್ಚಳಿಯದೆ ಉಳಿದಿವೆ.

ನಿನ್ನ ಮಡಿಲಿನ ಆ ಬೆಚ್ಚಗಿನ ಪ್ರೀತಿ
ಮತ್ತೆಂದೂ ಸಿಗುವುದಿಲ್ಲ ಎಂಬ ನೋವು
ಪ್ರತಿಕ್ಷಣವೂ ನಮ್ಮನ್ನು ಕಾಡುತ್ತಿದೆ.

ನೀನು ನಮ್ಮೊಂದಿಗೆ ಇಲ್ಲ ಎಂಬ ಸತ್ಯ
ಮನಸ್ಸಿಗೆ ಒಪ್ಪಿಕೊಳ್ಳಲು ಸಾಧ್ಯವಾಗುತ್ತಿಲ್ಲ.
ಆದರೂ, ನೀನು ನೀಡಿದ ಪ್ರೀತಿ,
ನೀನು ಕಲಿಸಿದ ಬದುಕಿನ ಮೌಲ್ಯಗಳು
ನಮ್ಮ ಜೀವನದುದ್ದಕ್ಕೂ ನಮ್ಮೊಂದಿಗಿರುತ್ತವೆ.
ದೇವರಲ್ಲಿ ನಮ್ಮ ಒಂದೇ ಪ್ರಾರ್ಥನೆ–
ನಿನ್ನ ಆತ್ಮಕ್ಕೆ ಚಿರಶಾಂತಿ ದೊರೆಯಲಿ.
ನಿನ್ನ ಆಶೀರ್ವಾದ ಸದಾ ನಮ್ಮ ಮೇಲೆ ಇರಲಿ.
ಅಮ್ಮಾ...
ನೀನು ನಮ್ಮ ಕಣ್ಣಿಗೆ ಕಾಣದಿದ್ದರೂ,
ನಮ್ಮ ಹೃದಯದಲ್ಲಿ ಎಂದೆಂದಿಗೂ ಜೀವಂತವಾಗಿರುವೆ.
ನಿನ್ನ ನೆನಪು ನಮ್ಮ ಉಸಿರಾಗಿರುವವರೆಗೆ
ನಿನ್ನನ್ನು ನಾವು ಎಂದಿಗೂ ಮರೆಯಲಾರೆವು.

– ಶರಣಪ್ಪ ಗುರುಬಸಪ್ಪ ಮಾಗಡಿ

ಹೃದಯದಲ್ಲಿ ದಯೆ, ನಡೆ-ನುಡಿಯಲ್ಲಿ ಮಾನವೀಯತೆ ಬೆಳೆಸಿಕೊಳ್ಳಿ: ರಂಭಾಪುರಿ ಜಗದ್ಗುರುಗಳು

# ಮಾತಿನಲ್ಲಿ ಸತ್ಯ, ಕಾಯಕದಲ್ಲಿ ಪ್ರಾಮಾಣಿಕತೆ ಇರಲಿ



**ವಿಜಯಸಾಕ್ಷಿ ಸುದ್ದಿ, ಹೊಸದುರ್ಗ**

ಧರ್ಮ ಎಂದರೆ ಕೇವಲ ಆಚರಣೆ ಅಲ್ಲ. ಮತ್ತೊಬ್ಬರಿಗೆ ಉಪಕಾರ ಮಾಡುವುದು, ಸಮಾಜದಲ್ಲಿ ಶಾಂತಿ ಮತ್ತು ಸೌಹಾರ್ದತೆ ಬೆಳೆಸುವುದು ಹಾಗೂ ಉತ್ತಮ ಜೀವನ ನಡೆಸುವುದೇ ನಿಜವಾದ ಧರ್ಮ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ತಾಲೂಕಿನ ದೇವಪುರ ಗ್ರಾಮದಲ್ಲಿ ಬುಧವಾರ ನಡೆದ ಜನಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಜೀವ ಮತ್ತು ಶಿವನ ಆಧ್ಯಾತ್ಮಿಕ ಸಂಬಂಧವನ್ನು ಅರಿತು ಶಿವ ಸಾಕ್ಷಾತ್ಕಾರದತ್ತ ಸಾಗುವುದು ವೀರಶೈವ ಧರ್ಮ ಸಾಧನೆಯ ಗುರಿಯಾಗಿದೆ ಎಂದರು.

ವೀರಶೈವ ಪರಂಪರೆಯಲ್ಲಿ ಇಷ್ಟಲಿಂಗವು ಶಿವನ ನಿರಂತರ ಸ್ಮರಣೆಯ ಸಂಕೇತವಾಗಿದೆ. ಇಷ್ಟಲಿಂಗ ಪೂಜೆ ಕೇವಲ ಪೂಜಾ ವಿಧಿಯಾಗದೆ, ಮನಸ್ಸನ್ನು ಶುದ್ಧಗೊಳಿಸಿ ಸತ್ಯ, ನೀತಿ ಹಾಗೂ ಸದಾಚಾರದ ಮಾರ್ಗದಲ್ಲಿ ನಡೆಯುವ ಸಂಕಲ್ಪವಾಗಿದೆ ಎಂದು ವಿವರಿಸಿದರು.

ವಿಧಾನ ಪರಿಷತ್ ಸದಸ್ಯ ನವೀನ ಅವರು ಧರ್ಮ ಸಮಾರಂಭ ಉದ್ಘಾಟಿಸಿ ಮಾತನಾಡಿ, ಭಾರತೀಯ ಸಂಸ್ಕೃತಿ ಮತ್ತು ಪರಂಪರೆ ದೇಶದ ಬಹುದೊಡ್ಡ ಶಕ್ತಿಯಾಗಿದ್ದು, ಅವುಗಳನ್ನು ಉಳಿಸಿಕೊಂಡು ಮುನ್ನಡೆಯುವುದು ಜೀವನದ ಶ್ರೇಯಸ್ಸಿಗೆ ಕಾರಣವಾಗುತ್ತದೆ ಎಂದರು. ದೇವಪುರ ಗ್ರಾಮಸ್ಥರು ಭಕ್ತಿ ಮತ್ತು ಶ್ರದ್ಧೆಯಿಂದ ಆಯೋಜಿಸಿರುವ ಕಾರ್ಯಕ್ರಮ ಸಂತಸ ತಂದಿದೆ ಎಂದು ಹೇಳಿದರು.

ವೀರಶೈವ ಸಮಾಜದ ಉಪಾಧ್ಯಕ್ಷ ಎಂ. ಶಿವಲಿಂಗಪ್ಪ, ಖನಿಜ ನಿಗಮದ ಮಾಜಿ ಅಧ್ಯಕ್ಷ ಎಸ್. ಲಿಂಗಮೂರ್ತಿ, ಹೊಸದುರ್ಗದ ಆರ್. ಹನುಮಂತಪ್ಪ, ಕೆ. ಅನಂತ್, ಜಿ.ಟಿ. ಅಜ್ಜಪ್ಪ, ದೊಡ್ಡಘಟ್ಟದ ದ್ಯಾಮಣ್ಣ, ಮಾವಿನಕಟ್ಟೆಯ ಡಿ. ಗುರುಸ್ವಾಮಿ, ಹೆಬ್ಬಳ್ಳಿಯ ಹೆಚ್.ಸಿ. ಮಲ್ಲಿಕಾರ್ಜುನ ಹಾಗೂ ಕೋಡಿಹಳ್ಳಿ ತಮ್ಮಣ್ಣ ಸೇರಿದಂತೆ ಹಲವರು ಭಾಗವಹಿಸಿ ಗುರುರಕ್ಷೆ ಪಡೆದರು.

ಹುಣಸಘಟ್ಟದ ಗುರುಮೂರ್ತಿ ಶಿವಾಚಾರ್ಯ ಸ್ವಾಮಿಗಳು ಹಾಗೂ ಹಣ್ಣೆಮಠದ ಮರುಳಸಿದ್ಧ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳು ಉಪದೇಶಾಮೃತ ನೀಡಿದರು. ಕೆ.ಎಸ್. ಕಲ್ಮಠ ಅಧ್ಯಕ್ಷತೆ ವಹಿಸಿದ್ದರು.

ಸಮಾರಂಭಕ್ಕೂ ಮುನ್ನ ಗ್ರಾಮದಲ್ಲಿ ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳ ಅಡ್ಡಪಲ್ಲಕ್ಕಿ ಮಹೋತ್ಸವ ಹಾಗೂ ಸಾಮೂಹಿಕ ಇಷ್ಟಲಿಂಗ ಮಹಾಪೂಜೆ ನೆರವೇರಿತು. ಸಹಸ್ರಾರು ಭಕ್ತರು ಪಾಲ್ಗೊಂಡು ಜಗದ್ಗುರುಗಳ ದರ್ಶನ ಹಾಗೂ ಆಶೀರ್ವಾದ ಪಡೆದರು. ನಂತರ ಅನ್ನದಾಸೋಹ ನಡೆಯಿತು.

ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲ ಸಾಧಕರಿಂದ ವೇದ ಘೋಷ, ಚನ್ನಗಿರಿ ಹಿರೇಮಠದ ಕೇದಾರ ಶಿವಶಾಂತವೀರ ಶಿವಾಚಾರ್ಯ ಸ್ವಾಮಿಗಳಿಂದ ಪ್ರಾರ್ಥನಾ ಗೀತೆ, ಧನಂಜಯ ನಿರೂಪಿಸಿದರು.

> ಮಾತಿನಲ್ಲಿ ಸತ್ಯ, ಕಾಯಕದಲ್ಲಿ ಪ್ರಾಮಾಣಿಕತೆ, ಹೃದಯದಲ್ಲಿ ದಯೆ ಹಾಗೂ ನಡೆ-ನುಡಿಯಲ್ಲಿ ಮಾನವೀಯತೆಯಿಂದ ಬಾಳುವುದೇ ಮನುಷ್ಯ ಜೀವನದ ಗುರಿಯಾಗಬೇಕು. ಧರ್ಮದ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಸಮಾಜದಲ್ಲಿ ಶಾಂತಿ ಮತ್ತು ಸೌಹಾರ್ದತೆ ನೆಲೆಸುತ್ತದೆ.
> – ಶ್ರೀ ರಂಭಾಪುರಿ ಜಗದ್ಗುರುಗಳು

# ಸ್ವಚ್ಛ ಶಿರಹಟ್ಟಿಯ ಹಿಂದಿನ ಶ್ರಮಿಕರಿಗೆ ಗೌರವ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಪಟ್ಟಣದ ಸ್ವಚ್ಛತೆ ಹಾಗೂ ಸಾರ್ವಜನಿಕರ ಆರೋಗ್ಯಕ್ಕಾಗಿ ತಮ್ಮ ಆರೋಗ್ಯವನ್ನೂ ಲೆಕ್ಕಿಸದೆ ಪ್ರತಿನಿತ್ಯ ಸೇವೆ ಸಲ್ಲಿಸುವ ಪೌರಕಾರ್ಮಿಕರ ಕಾರ್ಯ ಶ್ಲಾಘನೀಯ ಎಂದು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ನೀಲೇಶ ಹಾದಿಮನಿ ಹೇಳಿದರು.

ಬುಧವಾರ ಪಟ್ಟಣದ ಡಿ. ದೇವರಾಜ ಅರಸು ಭವನದಲ್ಲಿ ನಡೆದ 15ನೇ ವರ್ಷದ ಪೌರಕಾರ್ಮಿಕ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪೌರಕಾರ್ಮಿಕರ ನಿಸ್ವಾರ್ಥ ಸೇವೆಯಿಂದ ಸಾರ್ವಜನಿಕರು ಆರೋಗ್ಯಕರ ವಾತಾವರಣದಲ್ಲಿ ಜೀವನ ನಡೆಸಲು ಸಾಧ್ಯವಾಗಿದೆ. ಸರ್ಕಾರದಿಂದ ದೊರೆಯುವ ಎಲ್ಲ ಸೌಲಭ್ಯಗಳನ್ನು ಪೌರಕಾರ್ಮಿಕರಿಗೆ ತಲುಪಿಸಲು ಪ್ರಾಮಾಣಿಕವಾಗಿ ಕ್ರಮ ಕೈಗೊಳ್ಳಲಾಗುತ್ತಿದೆ. ಸಾರ್ವಜನಿಕರೂ ಪೌರಕಾರ್ಮಿಕರ ಕಾರ್ಯಕ್ಕೆ ಅಗತ್ಯ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಇತ್ತೀಚೆಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಅರಮನೆ ಆವರಣದಲ್ಲಿ ಪೌರಕಾರ್ಮಿಕರನ್ನು ಗೌರವಿಸಿರುವುದನ್ನು ಸ್ಮರಿಸಿದ ಅವರು, ಪೌರಸೇವೆ ಅತ್ಯಂತ ಶ್ರೇಷ್ಠವಾದ ಸೇವೆಯಾಗಿದೆ ಎಂದರು.



ಕಾರ್ಯಕ್ರಮದಲ್ಲಿ ವಿವಿಧ ಕ್ರೀಡಾಕೂಟಗಳಲ್ಲಿ ವಿಜೇತರಾದ ಪೌರಕಾರ್ಮಿಕರನ್ನು ಸನ್ಮಾನಿಸಲಾಯಿತು. ಇದಕ್ಕೂ ಮುನ್ನ ಶ್ರೀ ಬಸವೇಶ್ವರ ವೃತ್ತದಿಂದ ಮಹಾತ್ಮ ಗಾಂಧೀಜಿ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಗಳೊಂದಿಗೆ ಭವ್ಯ ಮೆರವಣಿಗೆ ನಡೆಯಿತು.

ಜಿಲ್ಲಾ ಪೌರಕಾರ್ಮಿಕರ ಸಂಘದ ಜಿಲ್ಲಾಧ್ಯಕ್ಷ ರಮೇಶ ಹಲಗಿ, ಹುಚ್ಚಪ್ಪ ಗೋಡೆಣ್ಣವರ, ಉಮೇಶ ತೇಲಿ, ಸಿದ್ದಮ್ಮ ಪೂಜಾರ, ಉಮೇಶ ಗಾಣಿಗೇರ, ರೂಪಾ ಹೂಗಾರ, ಉಡಚಪ್ಪ ಗೋಡೆಣ್ಣವರ, ಹಾಲಪ್ಪ ಬದ್ದೆಪ್ಪನವರ, ನಾಗೇಶ ಕುಲಕರ್ಣಿ, ಮಾಂತೇಶ ದಿವಟರ, ಚನ್ನಯ್ಯ ಹಿರೇಮಠ, ಉಡಚಪ್ಪ ನೀಲಣ್ಣವರ, ಬಿ.ಎಸ್. ಜಾಲಿಕಟ್ಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.



ಮಹಾತ್ಮ ಗಾಂಧೀಜಿ
ಅವರ 157 ನೇ ಜನ್ಮದಿನಾಚರಣೆ

ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ



ಲಾಲ್ ಬಹದ್ದೂರ್ ಶಾಸ್ತ್ರಿ
ಅವರ 122 ನೇ ಜನ್ಮ ದಿನಾಚರಣೆ

# ನನ್ನ ಜೀವನವೇ ನನ್ನ ಸಂದೇಶ



## ನಾಡಿನ ಸಮಸ್ತ ಜನತೆಗೆ ಗಾಂಧಿ ಜಯಂತಿಯ ಹಾರ್ದಿಕ ಶುಭಾಶಯಗಳು

"ಎಲ್ಲ ಒಳ್ಳೆಯ ಕ್ರಿಯೆಗಳು ಅಂತಿಮವಾಗಿ ಒಳ್ಳೆಯ ಫಲವನ್ನೇ ನೀಡುತ್ತವೆ ಎನ್ನುವುದು ನನ್ನ ಅಚಲ ನಂಬಿಕೆ"

— mkgandhi

ಸತ್ಯ, ಅಹಿಂಸೆ, ಸರಳತೆ, ಸೇವೆ ಮತ್ತು ದೇಶಭಕ್ತಿಯ ಮೌಲ್ಯಗಳನ್ನು ತಮ್ಮ ಬದುಕಿನ ಮೂಲಕ ಸಾರಿದ **ರಾಷ್ಟ್ರಪಿತ ಮಹಾತ್ಮ ಗಾಂಧೀಜಿ** ಹಾಗೂ ಮಾಜಿ ಪ್ರಧಾನಮಂತ್ರಿ **ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜನ್ಮದಿನಾಚರಣೆಯಂದು, ಈ ಮಹಾನ್ ಚೇತನಗಳಿಗೆ ಗೌರವಪೂರ್ವಕ ನಮನಗಳು.**

**ಗಾಂಧೀಜಿಯವರ ಚಿಂತನೆಗಳು ಚಿರಂತನ; ಅವರ ಆದರ್ಶಗಳು ಸದಾ ಪ್ರಸ್ತುತ**

"ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು"
-ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

CMofKarnataka https://dipr.karnataka.gov.in/ Karnatakavarthe ಕರ್ನಾಟಕ ವಾರ್ತೆ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka